ವಿಜಯಪುರ | ಸಂಪುಟ 01 | ಸಂಚಿಕೆ 286 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಮಂಗಳವಾರ, ಜನವರಿ 09, 2024

“ಸಿಂದಗಿ ತಾಲೂಕನ್ನು ಜಿಲ್ಲೆಯನ್ನಾಗಿ ಮಾಡುವ ನಿಟ್ಟಿನಲ್ಲಿ ಪ್ರಾರಂಭವಾದ ಹೋರಾಟದ ಹಿನ್ನೆಲೆಯಲ್ಲಿ ಜ.11 ಅಥವಾ 12ರಂದು ಮುಖ್ಯಮಂತ್ರಿಗಳ ಭೇಟಿಗಾಗಿ ನಿಯೋಗ ಹೋಗಲು ನಿರ್ಧಾರ ಮಾಡಲಾಗಿದೆ.



– ಅಶೋಕ ಮನಗೂಳಿ
ಶಾಸಕರು, ಸಿಂದಗಿ

### ಗದಗ ಜಿಲ್ಲೆಯ ಸೂರಣಗಿಯಲ್ಲಿ ನಡೆದ ದುರ್ಘಟನೆ | ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂ, ಗಾಯಾಳುಗಳಿಗೆ 50 ಸಾವಿರ ರೂ ಪರಿಹಾರ

# ವಿದ್ಯುತ್ ಸ್ಪರ್ಶ: ನಟ ಯಶ್ ಅಭಿಮಾನಿಗಳ ಸಾವು!

ಗದಗ: ರಾಕಿಂಗ್ ಸ್ಟಾರ್ ಯಶ್ ಹುಟ್ಟುಹಬ್ಬದ ಪ್ರಯುಕ್ತ ತಮ್ಮ ಊರಿನ ಬೀದಿಯಲ್ಲಿ ಕಟೌಟ್ ಕಟ್ಟುವಾಗ ವಿದ್ಯುತ್ ತಂತಿ ತಗುಲಿ ಮೂವರು ಯುವಕರು ಘೋರ ದುರ್ಮರಣಕ್ಕೀಡಾದ ಗದಗ ಜಿಲ್ಲೆಯ ಸೂರಣಗಿ ಗ್ರಾಮದಲ್ಲಿ ಈಗ ಸೂತಕದ ಛಾಯೆ ಆವರಿಸಿದೆ.

ಸಾಮೂಹಿಕ ಅಂತ್ಯಸಂಸ್ಕಾರ: ಯುವಕರ ಅಂತಿಮ ಸಂಸ್ಕಾರದಲ್ಲಿ ಇಡೀ ಸೂರಣಗಿ ಗ್ರಾಮವಲ್ಲದೆ ಸುತ್ತಮುತ್ತಲಿನ ಊರುಗಳ ಜನ ಸಹ ಭಾಗಿಯಾಗಿದ್ದರು. ವಿದ್ಯುತ್ ಪ್ರವಹಿಸಿ ಸಾವಿಗೀಡಾದ ಹಣಮಂತ ಹರಿ–ಜನ, ಮುರಳಿ ನಡುವಿನಮನಿ ಮತ್ತು ನವೀನ್ ಅವರ ಅಂತ್ಯಸಂಸ್ಕಾರವನ್ನು ಸಾಮೂಹಿಕವಾಗಿ ನೆರವೇ–ರಿಸಲಾಯಿತು.



ಪರಿಹಾರ: ಮೃತ ಯುವಕರ ಕುಟುಂಬದವರು ಬಡವರಾಗಿದ್ದು ಕೂಲಿ ಮಾಡಿಕೊಂಡು ಜೀವನ ನಡೆಸುವವರಾಗಿದ್ದಾರೆ. ಅವರ ಕುಟುಂಬಕ್ಕೆ ತಲಾ 2 ಲಕ್ಷ ರೂಪಾಯಿ ಪರಿಹಾರ ಮತ್ತು ಗಾಯಾಳುಗಳಿಗೆ ತಲಾ 50 ಸಾವಿರ ರೂಪಾಯಿ ಪರಿಹಾರವನ್ನು ಸರ್ಕಾರ ಘೋಷಿಸಿದೆ ಎಂದು ಗದಗ ಉಸ್ತುವಾರಿ ಸಚಿವ ಹೆಚ್.ಕೆ ಪಾಟೀಲ್ ತಿಳಿಸಿದ್ದಾರೆ.

ಸೂರಣಗಿ ಗ್ರಾಮಕ್ಕೆ ಜನಸಾಗರ ಹರಿದು ಬಂದಿದೆ. ಯಶ್ ಅವರ ಆಗಮನದ ಹಿನ್ನೆಲೆಯಲ್ಲಿ ಸಾವಿರಾರು ಅಭಿಮಾನಿಗಳು ಜಮಾಯಿಸಿದ್ದರು. ಅಕ್ಕಪಕ್ಕದ ಗ್ರಾಮಸ್ಥರು ಯಶ್ ಅವರನ್ನು ನೋಡಲು ಆಗಮಿಸಿದ್ದರು. ಜನರನ್ನು ನಿಯಂತ್ರಿಸಲು ಪೊಲೀಸರು ಹರಸಹಾಸಪಟ್ಟರು.

## ಹುಟ್ಟುಹಬ್ಬವೆಂದರೆ ಅಸಹ್ಯಪಡುವಂತಾಗಿದೆ

ಗದಗ: ರಾಕಿಂಗ್ ಸ್ಟಾರ್ ಯಶ್ ಹುಟ್ಟುಹಬ್ಬಕ್ಕೆ ಬ್ಯಾನರ್ ಕಟ್ಟುವಾಗ ಕರೆಂಟ್ ಶಾಕ್ ಹೊಡೆದು ಮೂವರು ಮೃತಪಟ್ಟಿದ್ದು ಈ ಹಿನ್ನೆಲೆಯಲ್ಲಿ ಗದಗ ಸೂರಣಗಿ ಗ್ರಾಮಕ್ಕೆ ತೆರಳಿದ ಯಶ್ ಮೃತರ ಮನೆಗೆ ತೆರಳಿ ಸಾಂತ್ವನ ಹೇಳಿದರು.

ನನ್ನ ಹುಟ್ಟುಹಬ್ಬದ ದಿನ ಕಟೌಟ್ ಕಟ್ಟುವಾಗ ಮೂವರು ಅಭಿಮಾನಿಗಳು ನಿಧನರಾದ ಘಟನೆ ತೀವ್ರ ನೋವುಂಟು ಮಾಡಿದೆ. ಬ್ಯಾನರ್ ಹಾಕೋದು ಕಟೌಟ್ ಕಟ್ಟೋದು ಬೇಡ. ಇನ್ನುಂದೆ ಈ ರೀತಿ ಮಾಡಬೇಡಿ ಎಂದು ಅಭಿಮಾನಿಗಳಿಗೆ ಯಶ್ ಕಿವಿಮಾತು ಹೇಳಿದ್ದಾರೆ.

ಮೃತ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ನಂತರ ಮಾಧ್ಯಮಗಳ ಜೊತೆ ಮಾತನಾಡಿದ ಯಶ್, ನನ್ನ ಹುಟ್ಟುಹಬ್ಬ ಯಾಕೆ ಬರುತ್ತೋ ಅಂತ ಭಯವಾಗುತ್ತಿದೆ.



ಯಾರೂ ಈ ರೀತಿ ಮಾಡಬೇಡಿ. ಬರ್ತಡೇ ಮಾಡಬೇಡಿ ಎಂದು ಹೇಳಿದರೆ, ಬೇಸರ ಮಾಡಿಕೊಳ್ಳುತ್ತಾರೆ. ನೀವು ಬ್ಯಾನರ್, ಕಟೌಟ್ ಹಾಕುವುದನ್ನು ನಾನು ಇಷ್ಟಪಡುವುದಿಲ್ಲ. ನನ್ನ ಮೇಲೆ ಪ್ರೀತಿ ಇದ್ದರೆ ಜವಾಬ್ದಾರಿಯಿಂದ ನಡೆದುಕೊಳ್ಳಿ ಎಂದು ಹೇಳಿದ್ದು, ಮನೆ ಮಕ್ಕಳನ್ನು ಕಳೆದುಕೊಂಡಿರುವ ಕುಟುಂಬಸ್ಥ–ರಿಗೆ ಏನು ನೆರವು ಬೇಕೋ ಅದನ್ನು ಮಾಡುತ್ತೇನೆ ಎಂದು ಭರವಸೆ ನೀಡಿದರು.

### ಕಾರಜೋಳ & ತೊನಶ್ಯಾಳದಲ್ಲಿ ಜೆಜೆಎಂ ಯೋಜನೆಗೆ ಚಾಲನೆ ನೀಡಿದ ಎಂಎಲ್ಸಿ ಸುನೀಲಗೌಡ ಪಾಟೀಲ ಸ್ಪಷ್ಟನೆ

# ಜೆಜೆಎಂ ಯೋಜನೆ: ಗ್ರಾಪಂಗಳ ಸಮುದಾಯ ವಂತಿಗೆ ರದ್ದು

ಉದಯರಶ್ಮಿ ನ್ಯೂಸ್

ವಿಜಯಪುರ: ಗ್ರಾಮಸ್ಥರು ಮತ್ತು ಗ್ರಾಮ ಪಂಚಾಯಿತಿ ಪರವಾಗಿ ನಾನು ಹೋರಾಟ ಮಾಡಿದರ ಫಲವಾಗಿ ಜಲಜೀವನ ಮಿಷನ್(ಜೆಜೆಎಂ) ಯೋಜನೆಗೆ ಗ್ರಾ. ಪಂ. ಗಳ ವತಿಯಿಂದ ನೀಡಬೇಕಿದ್ದ ಸಮುದಾಯ ವಂತಿಗೆಯನ್ನು ರದ್ದು ಪಡಿಸಲಾಗಿದೆ. ಈಗ ಸರಕಾರವೇ ಈ ಹಣವನ್ನು ಭರಿಸುತ್ತಿದ್ದು, ಈ ದುಡ್ಡಿನಲ್ಲಿ ಗ್ರಾ. ಪಂ. ಗಳು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಅನುಕೂಲವಾಗಿದೆ ಎಂದು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ.

ಸೋಮವಾರ ಬಬಲೇಶ್ವರ ತಾಲೂಕಿನ ಕಾರಜೋಳ ಗ್ರಾಮದಲ್ಲಿ ತೊನಶ್ಯಾಳ ಗ್ರಾಮದಲ್ಲಿ ರೂ.1.47 ಕೋ. ಮತ್ತು ಕಾರಜೋಳ ಗ್ರಾಮದಲ್ಲಿ ರೂ.1.22 ಕೋ. ವೆಚ್ಚದಲ್ಲಿ ಮನೆಮನೆಗಳಿಗೆ ನೀರು ಪೂರೈಸುವ ಜೆಜೆಎಂ ಯೋಜನೆಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಈ ಮುಂಚೆ ಜೆಜೆಎಂ ಯೋಜನೆ ಕಾಮಗಾರಿಗಳಿಗೆ ಪ್ರತಿಯೊಂದು ಗ್ರಾ. ಪಂ. ಗಳು 15ನೇ ಹಣಕಾಸಿನಡಿ ಮತ್ತು ಫಲಾನುಭವಿಗಳಿಂದ ಸಮುದಾಯ ವಂತಿಗೆಯನ್ನು ನೀಡಬೇಕಿತ್ತು. ಕೊರೊನಾ ಸಂದರ್ಭದಲ್ಲಿ ಸಂಕಷ್ಟದಲ್ಲಿದ್ದ ಗ್ರಾಮಸ್ಥರು ನಮಗೆ ನಳಗಳೇ ಬೇಡ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು. ಅಲ್ಲದೇ, ಗ್ರಾ. ಪಂ. ಗಳು ಕೂಡ 15ನೇ ಹಣಕಾಸಿನಡಿ ವಂತಿಗೆ ಪಾವತಿಸಿಸುವುದರಿಂದ ಗ್ರಾಮಗಳಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗಿತ್ತು. ಹಲವಾರು ಗ್ರಾ. ಪಂ. ಗಳಿಗೆ ವಿದ್ಯುತ್ ಬಿಲ್ ಪಾವತಿಸಲೂ ಹಣವಿರಲಿಲ್ಲ. ಈ ಕುರಿತು ನಾನು ವಿಧಾನ ಪರಿಷತ್ತಿನ ಶಾಸಕರ ಜೊತೆಗೂಡಿ ಅಂದಿನ ಸಚಿವ ಕೆ. ಎಸ್. ಈಶ್ವರಪ್ಪ ಅವರನ್ನು ಭೇಟಿ ಮಾಡಿದ್ದೆ. ಉತ್ತರ ಪ್ರದೇಶ ಮಾದ–ರಿಯಂತೆ ರಾಜ್ಯ ಸರಕಾರವೇ ಗ್ರಾ. ಪಂ.ಗಳ ಸಮುದಾಯ ವಂತಿಗೆಯ ಪಾಲನ್ನು ಭರಿಸಬೇಕು ಎಂದು ಮನವಿ ಮಾಡಿದ್ದೆ. ಅದಕ್ಕೆ ಸಚಿವರು ಒಪ್ಪಿದ್ದರು. ಅಲ್ಲದೇ, ಗ್ರಾಮ ಪಂಚಾಯಿತಿಗಳಿಂದ ಪಡೆಯಲಾಗಿದ್ದ ಸಮುದಾಯ ವಂತಿಗೆಯನ್ನು ಮರಳಿಸಿದ್ದರು. ಇದರಿಂದ ಫಲಾನುಭವಿಗಳು ಮತ್ತು ಗ್ರಾ. ಪಂ. ಗಳಿಗೆ ಹೆಚ್ಚುವರಿ ಹೊರೆ ತಪ್ಪಿತು ಎಂದು ಅವರು ತಿಳಿಸಿದರು.



ಈಗ ಜಿಲ್ಲೆಯಲ್ಲಿ ಜೆಜೆ–ಎಂ ಯೋಜನೆ ಬಹುತೇಕ ಪೂರ್ಣವಾಗುವ ಹಂತದಲ್ಲಿದ್ದು, ಕೆಲವು ಕಡೆ ಪೈಪುಗಳು ಮತ್ತು ನಳಗಳ ಅಳವಡಿಕೆ ಕಾಮಗಾರಿ ಪ್ರಗತಿಯಲ್ಲಿದೆ. ಈಗ ಯೋಜನೆ ಚಾಲ್ತಿಯಲ್ಲಿರುವ ಕೆಲವು ಕಡೆ ಜಲಮೂಲಗಳ ಸಮಸ್ಯೆ ಇದೆ. ಇದಕ್ಕಾಗಿಯೇ ಜಲಧಾರೆ ಯೋಜನೆಯಡಿ ಆಲಮಟ್ಟಿ ಜಲಾಶಯದಿಂದ ಗ್ರಾಮಗಳಿಗೆ ನೀರು ಪೂರೈಸುವ ಕಾಮಗಾರಿ ಪ್ರಗತಿಯಲ್ಲಿದ್ದು, ಇನ್ನೆರಡು ವರ್ಷಗಳಲ್ಲಿ ಪೂರ್ಣವಾಗಲಿದೆ. ಇದು ಪೂರ್ಣವಾದ ಬಳಿಕ ಕುಡಿಯುವ ನೀರಿನ ಸಮಸ್ಯೆಗೆ ಪರಿಹಾರ ಸಿಗಲಿದೆ. ಅಲ್ಲದೇ, ಗ್ರಾಮೀಣ ಭಾಗದ ಪ್ರತಿಯೊಂದು ಮನೆಗಳಿಗೆ ನಳಗಳ ಮೂಲಕ ಸಮರ್ಪಕವಾಗಿ ನೀರು ಪೂರೈಕೆಯಾಗಲಿದೆ ಎಂದು ಅವರು ತಿಳಿಸಿದರು.


ಈಗ ಹೊನಗನಹಳ್ಳಿ, ಸವನಳ್ಳಿ, ತೊನಶ್ಯಾಳ, ತೊನಶ್ಯಾಳ ಪುನರ್ವಸತಿ ಕೇಂದ್ರ –1ಕ್ಕೆ ಕುಡಿಯುವ ನೀರು ಪೂರೈಸಲು ಸಚಿವ ಎಂ. ಬಿ. ಪಾಟೀಲ ಅವರು ಕಾರಜೋಳ ಕೆರೆಯಲ್ಲಿ ತೆರೆದ ಭಾವಿ ತೋಡಿಸಲು ಕ್ರಮ ಕೈಗೊಂಡಿದ್ದಾರೆ. ಅಲ್ಲಿ ಜಲಮೂಲ ಸೃಷ್ಠಿ ಮಾಡಿ ಮೋಟರ್ ವ್ಯವಸ್ಥೆ ಕಲ್ಪಿಸಿ ಈ ಗ್ರಾಮಗಳಿಗೆ ಶಾಶ್ವತವಾಗಿ ಕುಡಿಯಲು ನೀರು ಪೂರೈಸಲು ಕ್ರಮ ಕೈಗೊಂಡಿದ್ದಾರೆ. ಇದು ಇತರೇ ಯೋಜನೆಗಳಿಗಿಂತ ಭಿನ್ನವಾಗಿದೆ ಎಂದು ಸುನೀಲಗೌಡ ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಸೋಮನಾಥ ಕಳ್ಳಿಮನಿ, ಬಿ. ಡಿ. ಅಸಂಗಿ, ರಾಚಯ್ಯ ಮಠಪತಿ, ಪವನ ಆಸಂಗಿ, ಪರಶುರಾಮ ಮಲಘಾಣ, ಸುರೇಶ ಜಾಧವ, ಚಂದ್ರವ್ವ ಚಲವಾದಿ, ಪಾಂಡು ಜಾಧವ, ಪರಶು ವಾಲಿಕಾರ, ಕಾಂತು ಓಡಿಯರ, ಮಾಂತು ಯಾಳವಾರ, ಆನಂದ ಜಾಧವ, ಯಂಕಪ್ಪ ಉಪ್ಪಾರ, ಲಕ್ಷ್ಮಣ ಪೂಜಾರಿ, ನಾಗರಾಜ ಲಂಬು, ಅಡಿವೆಪ್ಪ ಸಾಲಗಲ್ಲ, ರಾಜು ತಳೆವಾಡ ಮುಂತಾದವರು ಉಪಸ್ಥಿತರಿದ್ದರು.

## ರಾಜ ನುಡಿ

ದೇವರು ಮಂದಿರಕ್ಕಿಂತ, ಮನುಷ್ಯನ ಹೃದಯ ಮಂದಿರವನ್ನು ಇಷ್ಟ ಪಡುತ್ತಾನಂತೆ. ಏಕೆಂದರೆ ಮಂದಿರದಲ್ಲಿ ಮನುಷ್ಯನ ಆಟ ನಡೆಯುತ್ತದೆ. ಹೃದಯದಲ್ಲಿ ಕೇವಲ ದೇವರದ್ದು ಮಾತ್ರ ನಡೆಯುತ್ತದೆ. ಹೀಗಾಗಿ ಹೃದಯದಲ್ಲಿ ಪ್ರೀತಿಯ ಹೊರತು ಏನನ್ನೂ ಇಟ್ಟುಕೊಳ್ಳಬೇಡಿ.

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 273

### ಕೂಡಲಚೆನ್ನಸಂಗಮದೇವನ ದಿವ್ಯಲೀಲೆ


*ಕಿರಿದಾದ ಬೀಜದಲ್ಲಿ ಹಿರಿಯ ತರುವಡಗಿದ ಪರಿಯಂತೆ,*
*ಕರಗತವಾದ ಕನ್ನಡಿಯಲ್ಲಿ ಕರಿಗಿರಿಗಳು ತೋರುವ ಪರಿಯಂತೆ*
*ಜಗದ್ವ್ಯಾಪಕವಾದ ಪರವಸ್ತುವು ಖಂಡಿತಾಕಾರಮಾದ ಶರೀರದಲ್ಲಿ*
*ಅತಿ ಸೂಕ್ಷ್ಮ ಪ್ರಮಾಣದಲ್ಲಿರ್ಪಂತೆ,*
*ಪರತರಶಿವಲಿಂಗವು ಸದ್ಭಕ್ತರನುದ್ಧರಿಪ ಸದಿಚ್ಛೆಯಿಂದ ಲಿಂಗಾಕಾರವಾಗಿ ನೆಲೆಗೊಂಡಿರ್ಪುದು.*
*‘ಅಣೋರಣೀಯಾನ್ ಮಹತೋ ಮಹೀಯಾನ್’ ಎಂದುದಾಗಿ,*
*ಪರಬ್ರಹ್ಮರೂಪವಾದ ಲಿಂಗವು, ಮಹದ್ರೂಪದಿಂದ ಅಖಂಡವಾಗಿಯೂ*
*ಅಣುರೂಪದಿಂದ ಖಂಡಿತವಾಗಿಯೂ ತೋರುವುದು.*
*ಕೂಡಲಚೆನ್ನಸಂಗಮದೇವಾ ಇದು ನಿಮ್ಮ ದಿವ್ಯಲೀಲೆಯಯ್ಯಾ !*

– ಚೆನ್ನಬಸವಣ್ಣನವರು

ಬಸವಣ್ಣನವರಿಗೆ ಲಿಂಗವು ಜಗದಗಲ ಮುಗಿಲಗಲ ವ್ಯಾಪಕವಾಗಿ ಕಂಡಂತೆ ಇಲ್ಲಿ ಚೆನ್ನಬಸವಣ್ಣನವರು ಸಹ ಲಿಂಗದ ಇರುವಿಕೆಯನ್ನು ಅಣುವಿನಿಂದ ಮಹತ್ತಿನವರೆಗೆ ಕಂಡುಕೊಂಡಿದ್ದಾರೆ, ಬೃಹದಾಕಾರದ ಒಂದು ಆಲದ ಮರವು ಪ್ರಾರಂಭದಲ್ಲಿ ಒಂದು ಅತ್ಯಂತ ಚಿಕ್ಕ ಬೀಜದಲ್ಲಿ ಹೇಗೆ ಅಡಗಿತ್ತೋ ಅದೇ ರೀತಿಯಾಗಿ ಜಗದ್ ವ್ಯಾಪಕವಾದ ಮಹಾಲಿಂಗವೆಂಬ ಮಹಾಮರವು ಅಂಗವೆಂಬ ಬೀಜರೂಪದಲ್ಲಿ ಅಡಗಿದೆ. ಬೃಹದಾಕಾರದ ಆನೆ, ಪರ್ವತಗಳನ್ನು ಒಂದು ಕನ್ನಡಿಯಲ್ಲಿ ತೋರುವಂತೆ ಮಹಾಲಿಂಗವನ್ನು ಇಷ್ಟಲಿಂಗವೆಂಬ ಕನ್ನಡಿಯಲ್ಲಿ ಪ್ರಾಣಲಿಂಗ ಮತ್ತು ಮಹಾಲಿಂಗದ ಅಖಂಡತೆಯನ್ನು ಕಂಡು ಬೆರಗಾಗಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಹೊನ್ನಳ್ಳಿ ಕೆರೆಯಲ್ಲಿ ಮೊಸಳೆ ಹೆದರಿದ ಗ್ರಾಮಸ್ಥರು!



ಉದಯರಶ್ಮಿ ನ್ಯೂಸ್

ಬ್ರಹ್ಮದೇವನಮಡು: ಸಿಂದಗಿ ತಾಲೂಕಿನ ಹೊನ್ನಳ್ಳಿ ಗ್ರಾಮದ ಸರಸ್ವತಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಪಕ್ಕದ ಕೆರೆಯಲ್ಲಿ ಕಳೆದೆರೆಡು ದಿನಗಳಿಂದ ಬೃಹತ್ ಮೊಸಳೆ ಪ್ರತ್ಯಕ್ಷವಾಗಿದೆ.

ಭಾನುವಾರ ಮಧ್ಯಾಹ್ನ ಗ್ರಾಮದ ಯುವಕನೊಬ್ಬನಿಗೆ ಈ ಮೊಸಳೆ ಕಾಣಿಸಿಕೊಂಡಿದ್ದನ್ನು ಗ್ರಾಮಸ್ಥರಿಗೆ ತಿಳಿಸಿದ್ದಾನೆ. ಇದರಿಂದ ಗ್ರಾಮಸ್ಥರು ಆತಂಕಗೊಂಡಿದ್ದಾರೆ. ಕೆರೆ ಸುತ್ತಲಿನ ಪ್ರದೇಶದಲ್ಲಿ ಮಹಿಳೆಯರು ಬಟ್ಟೆ ತೊಳೆಯಲು ತೆರಳುತ್ತಾರೆ. ವಿದ್ಯಾರ್ಥಿಗಳು, ಗ್ರಾಮಸ್ಥರು ಕೆರೆ ಸಮೀಪಕ್ಕೆ ಬಯಲು ಶೌಚಕ್ಕೆ ಹೋಗುತ್ತಿದ್ದಾರೆ. ಮೊಸಳೆ ದಾಳಿ ಮಾಡುವ ಆತಂಕ ಗ್ರಾಮಸ್ಥರಲ್ಲಿ ಮನೆ ಮಾಡಿದೆ. ಕಳೆದ ನಾಲ್ಕು ವರ್ಷದಿಂದ ಈ ಬೃಹತ್ ಗಾತ್ರದ ಮೊಸಳೆ ಕೆರೆಯಲ್ಲಿದ್ದು, ಜನಜಂಗುಳಿ ಕಡಿಮೆಯಾದಾಗ ಹೊರಬರುತ್ತದೆ ಎಂದು ಶಬ್ಬಿರ್ ಮಖಾಂದಾರ ತಿಳಿಸಿದ್ದಾರೆ. ಅಲ್ಲದೇ ಈ ಕುರಿತು ಮುಖ್ಯ ಅರಣ್ಯಾಧಿಕಾರಿ, ಮುಖ್ಯ ಅಭಿಯಂತರ, ಜಲ ಸರಬರಾಜು ಮಂಡಳಿಗೆ ಹಲವು ಬಾರಿ ಮನವಿ ಸಲ್ಲಿಸಿದರು. ಯಾವುದೇ ಕ್ರಮ ಕೈಗೊಂಡಿಲ್ಲ. ಕೂಡಲೇ ಇನ್ನಾದರೂ ಸಂಬಂಧಪಟ್ಟವರು ಕೆರೆ ಸುತ್ತಲಿನ ಪ್ರದೇಶಕ್ಕೆ ತಂತಿ ಬೇಲಿ ಹಾಕಿ ಮೊಸಳೆ ಸೇರಿ ಹಿಡಿಯುವಂತೆ ಶಾಲೆ ಮುಖ್ಯಗುರು ಮಲ್ಲಿಕಾರ್ಜುನ ಭಜಂತ್ರಿ, ಕಾಂಗ್ರೆಸ್ ಯುವ ಮುಖಂಡ ಚಂದ್ರಶೇಖರ ಕೆಂಭಾವಿ, ಆದೀಲ್ ನಾಯ್ಕೋಡಿ, ಮುಸ್ತಾಫ್ ವಡಗೇರಿ, ರಮೇಶ ಡಿಗ್ಗಿ, ರಮೇಶ ತಳವಾರ, ಸಂತೋಷ ಭಜಂತ್ರಿ ಆಗ್ರಹಿಸಿದ್ದಾರೆ.

### ಕರಜಗಿ–ವಿಜಯಪುರ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ | ಫೆಬ್ರವರಿ ಅಂತ್ಯಕ್ಕೆ ಭೂಮಿಪೂಜೆ

# ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿ :ಸಂಸದ ಜಿಗಜಿಣಗಿ

ಉದಯರಶ್ಮಿ ನ್ಯೂಸ್

ಇಂಡಿ: ಗಡಿಭಾಗದ ಕರಜಗಿ ಗ್ರಾಮದಿಂದ ಇಂಡಿ ಪಟ್ಟಣದ ಮಾರ್ಗವಾಗಿ ವಿಜಯಪುರಕ್ಕೆ ಸಾಗಲಿರುವ ರಾಷ್ಟ್ರೀಯ ಹೆದ್ದಾರಿ ನಿರ್ಮಾಣದ ಭೂಸ್ವಾಧಿನ ಪ್ರಕ್ರಿಯೆ ನಡದಿದ್ದು, ಫೆಬ್ರವರಿ ಕೊನೆಯ ವಾರದಲ್ಲಿ ರಸ್ತೆ ಕಾಮಗಾರಿಗೆ ಭೂಮಿಪೂಜೆ ಮಾಡುವ ಚಿಂತನೆ ಹೊಂದಿದ್ದೇವೆ ಎಂದು ವಿಜಯಪುರ ಸಂಸದ ರಮೇಶ ಜಿಗಜಿಣಗಿ ಹೇಳಿದರು.



ಅವರು ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿ, ಭೂಸ್ವಾಧೀನ ಪ್ರಕ್ರಿಯೆ ಸಧ್ಯ ನಾಗಠಾಣ ಗ್ರಾಮದವರೆಗೆ ಬಂದಿದ್ದು, ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ಮೇಲೆ ಗುತ್ತಿಗೆದಾರನಿಗೆ ಕಾಮಗಾರಿ ಆದ–ೇಶ ನೀಡಲಾಗುವುದು. ಕೇಂದ್ರದ ರಾಷ್ಟ್ರೀಯ ಹೆದ್ದಾರಿ ಸಚಿವರ ಗಮನ ಸೆಳೆದು ಶೀಘ್ರದಲ್ಲಿಯೇ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯ ಭೂಮಿಪೂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ ಎಂದು ತಿಳಿಸಿದರು.

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ದೇಶದಲ್ಲಿ ಹಮ್ಮಿಕೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ವಿಜಯಪುರ ಜಿಲ್ಲೆಯ ಅಭಿವೃದ್ಧಿಗೆ ನೀಡಿರುವ ಲಕ್ಷಕೋಟಿ ಅನುಧಾನದಲ್ಲಿ ಹಮ್ಮಿಕೊಂಡಿರುವ ಕಾಮಗಾರಿಗಳನ್ನು ಮುಂದಿಟ್ಟುಕೊಂಡು ಚುನಾವಣೆಯಲ್ಲಿ ಮತದಾರರ ಬಳಿ ಹೋಗುತ್ತೇವೆ ಎಂದ ಅವರು, ಹಿಂದೆಂದೂ ಯಾವ ಸರ್ಕಾರವೂ ನೀಡದಷ್ಟು ಅನುದಾನ ಪ್ರಧಾನಿ ನರೇಂದ್ರ ಮೋದಿ ಅವರ ನೇತ್ರತ್ವದ ಕೇಂದ್ರದ ಬಿಜೆಪಿ ಸರ್ಕಾರ ನೀಡಿದೆ ಎಂದು ಹೇಳಿದರು.

ಅಕ್ಕಲಕೋಟ–ವಿಜಯಪುರ ರಾಷ್ಟ್ರೀಯ ಹೆದ್ದಾರಿ, ಬ್ರಾಡ್ಜಗೇಜ್ ನಿರ್ಮಾಣ, ವಿದ್ಯುತ್ ಚಾಲಿತ ರೈಲು ಓಡಾಟ, ರೈಲ್ವೆ ಓವರ್ ಬ್ರಿಡ್ಜ್, 400 ಕಿ.ವ್ಯಾ ವಿದ್ಯುತ್ ಶೇಖರಣಾ ಕೇಂದ್ರ, ಇಂಡಿ ರೈಲು ನಿಲ್ದಾಣದಲ್ಲಿ ಎಕ್ಸಪ್ರೆಸ್ ರೈಲುಗಳ ನಿಲುಗಡೆ, ಅಮೃತ್–2 ಯೋಜನೆ ಮೂಲಕ ಚಡಚಣಕ್ಕೆ ನಿರಂತರ ಕುಡಿಯುವ ನೀರು ಪೂರೈಸುವ ಯೋಜನೆ, ಭೂತನಾಳ ದುರ್ಗಾದೇವಿ ದೇವಸ್ಥಾನ ಅಭಿವೃದ್ಧಿಗಾಗಿ ಅನುದಾನ, ಹೊಸ ರೈಲು ನಿಲ್ದಾಣ ಕಾಮಗಾರಿ, ಅಲಿಯಾಬಾದದಲ್ಲಿ ಗೂಡ್ಸಶೆಡ್ ನಿರ್ಮಾಣ, ಗೋಲಗುಂಬಜ್ ಎಕ್ಸಪ್ರೆಸ್ ರೈಲು ವಿಜಯಪುರದಿಂದ ಪಂಡರಪೂರದವರೆಗೆ ವಿಸ್ತರಣೆ, ವಿಜಯಪುರ–ಸೋಲಾಪೂರ ಚತುಷ್ಪಥ ರಸ್ತೆ, ದ್ವಿಪಥ ಹೆದ್ದಾರಿ, ಶಿರಾಡೋಣ–ಝಳಕಿ ರಾಷ್ಟ್ರೀಯ ಹೆದ್ದಾರಿ, ಝಳಕಿಯಿಂದ–ಇಂಡಿವರೆಗೆ ರಸ್ತೆ ದುರಸ್ತಿಗೆ ಅನುಧಾನ ಸೇರಿದಂತೆ ಲಕ್ಷ ಕೋಟಿಗೂ ಅಧಿಕ ಅನುದಾನ ವಿಜಯಪುರ ಜಿಲ್ಲೆಗೆ ಪ್ರಧಾನಿ ನರೇಂದ್ರ ಮೋದಿ ಅವರ ನೇತ್ರತ್ವದ ಬಿಜೆಪಿ ಸರ್ಕಾರ ನೀಡಿದೆ ಎಂದು ಹೇಳಿದರು.



### ಆಕ್ಸಫರ್ಡ್ ಐಐಟಿ ಒಲಿಂಪಿಯಾಡ್ ಶಾಲೆಯ ಕ್ರೀಡಾಕೂಟದಲ್ಲಿ ಬಸವರಾಜ ಕೌಲಗಿ ಅಭಿಮತ

# ಆರೋಗ್ಯಪೂರ್ಣ ಜೀವನಕ್ಕೆ ಕ್ರೀಡೆ ಅತ್ಯಗತ್ಯ

**ಉದಯರಶ್ಮಿ ನ್ಯೂಸ್**




ವಿಜಯಪುರ: ಆರೋಗ್ಯ ಪೂರ್ಣವಾದ ದೇಹದಲ್ಲಿ ಮಾತ್ರ ಆರೋಗ್ಯಪೂರ್ಣವಾದ ಮನಸ್ಸು ಅರಳಲು ಸಾಧ್ಯ. ಮಕ್ಕಳ ಪರಿಪೂರ್ಣ ವ್ಯಕ್ತಿತ್ವ ವಿಕಾಸಕ್ಕಾಗಿ ನಾವು ಅವರ ಆಸಕ್ತಿಗಳನ್ನು ಪೋಷಿಸಬೇಕಾಗಿದೆ, ಮಕ್ಕಳ ಕ್ರೀಡಾಸಕ್ತಿಗೆ ನೀರೆರೆದು ಪೋಷಿಸಿದಾಗ ಮಾತ್ರ ಆರೋಗ್ಯ ಪೂರ್ಣ ಜೀವನವನ್ನು ನಡೆಸಲು ಸಾಧ್ಯವಾಗುತ್ತದೆ ಎಂದು ಎಕ್ಸಲೆಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಅಧ್ಯಕ್ಷ ಬಸವರಾಜ ಕೌಲಗಿ ಹೇಳಿದರು.

ನಗರದ ಭಾರತ ರತ್ನ ಡಾ. ಬಿ.ಆರ್ ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆದ ಆಕ್ಸ್ಪರ್ಡ್ ಐ ಐ ಟಿ ಒಲಿಂಪಿಯಾಡ್ ಶಾಲೆಯ ವಾರ್ಷಿಕ ಕ್ರೀಡಾಕೂಟ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಕ್ರೀಡಾಕೂಟವನ್ನು ಉದ್ಘಾಟಿಸಿದ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಾ ವಿಜಯಕುಮಾರ ಆಜುರು ಮಾತನಾಡಿ "ಕ್ರೀಡೆಗೆ ಹೆಚ್ಚಿನ ಆದ್ಯತೆ ನೀಡುವುದು ಇಂದಿನ ಅಗತ್ಯವಾಗಿದೆ. ಒತ್ತಡದ ಜೀವನಕ್ರಮ ಅನುಸರಿಸುತ್ತಿರುವ ನಾವೆಲ್ಲರೂ ರೋಗ ಮುಕ್ತ ಜೀವನ ನಡೆಸಲು ಮಕ್ಕಳನ್ನು ಕ್ರೀಡಾ ಚಟುವಟಿಕೆಯಲ್ಲಿ ತೊಡಗಿಸಬೇಕು, ಆ ಕೆಲಸವನ್ನು ಆಕ್ಸ್ಪರ್ಡ್ ಸಂಸ್ಥೆ ಅತ್ಯಂತ ಶ್ರದ್ದೆಯಿಂದ ಮಾಡುತ್ತಿದೆ, ಪಾಲಕರು ಕೂಡ ಮಕ್ಕಳ ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹಿಸಬೇಕು" ಎಂದರು. ಇನ್ನೋರ್ವ ಅತಿಥಿ ನಗರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ ಮಾತನಾಡಿ, "ಆಕ್ಸ್ಪರ್ಡ್ ಶಾಲೆ ಪ್ರತಿ ವರ್ಷ ನಗರದಲ್ಲಿ ಎಸ್ ಎಸ್ ಎಲ್ ಸಿ ಫಲಿತಾಂಶದಲ್ಲಿ ನೂರಕ್ಕೆ ನೂರು ಫಲಿತಾಂಶ ತರುವುದರ ಮೂಲಕ ಅತ್ಯಂತ ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ಒದಗಿಸುತ್ತಿರುವ ಆಕ್ಸ್ಪರ್ಡ್ ಸಂಸ್ಥೆಯ ಸಾಧನೆ ದೊಡ್ಡದು. ಮಕ್ಕಳ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೂ ವಿಶೇಷ ಆದ್ಯತೆ ನೀಡುತ್ತಿರುವುದು ಸಂತೋಷವನ್ನುಂಟು ಮಾಡಿದೆ ಎಂದರು

"ಆಕ್ಸ್ಪರ್ಡ್ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರಾದ ಸಂಗಮೇಶ್ ಬಬಲೇಶ್ವರ ಮಾತನಾಡಿ, "ಆರೋಗ್ಯವೇ ಭಾಗ್ಯ, ಆರೋಗ್ಯದ ಮುಂದೆ ಯಾವ ಭಾಗ್ಯಗಳು ಇಲ್ಲ. ಬದುಕಿನ ಎಲ್ಲಾ ಭಾಗ್ಯಗಳ ಯಶಸ್ಸಿಗೂ ಆರೋಗ್ಯವೇ ಮೂಲ ತಾಯಿಬೇರು ಎನ್ನುವುದನ್ನು ಕರೋನ ಕಾಲಘಟ್ಟದಲ್ಲಿ ನಾವೆಲ್ಲ ಅರ್ಥ ಮಾಡಿಕೊಂಡಿದ್ದೇವೆ. ಮಕ್ಕಳು ಆರೋಗ್ಯಪೂರ್ಣವಾಗಿ ಸಶಕ್ತ, ವ್ಯಕ್ತಿಗಳಾಗಿ ಬೆಳೆಯಬೇಕೆಂದರೆ ಅವರು ಉತ್ತಮ ಕ್ರೀಡಾಪಟುವಾಗಿಯೂ ರೂಪಗೊಳ್ಳಬೇಕು, ಆಗ ಮಾತ್ರ ಅವರ ಶೈಕ್ಷಣಿಕ ಸಾಂಸ್ಕೃತಿಕ ಸಾಧನೆಗೆ ಒಂದು ಅರ್ಥ ಬರುತ್ತದೆ. ಆ ನಿಟ್ಟಿನಲ್ಲಿ ನಮ್ಮ ಶಿಕ್ಷಣ ಸಂಸ್ಥೆ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ತಮ್ಮೆಲ್ಲರ ಸಹಕಾರ ಸದಾ ಇರಲಿ ಎಂದರು.

ಎಕ್ಸಲೆಂಟ್ ಸಂಸ್ಥೆಯು ನಿರ್ದೇಶಕರುಗಳಾದ ರಾಜಶೇಖರ ಕೌಲಗಿ, ಮಂಜುನಾಥ ಕೌಲಗಿ, ಆಕ್ಸ್ಪರ್ಡ್ ಸಮೂಹ ಶಿಕ್ಷಣ ಸಂಸ್ಥೆಗಳ ಆಡಳಿತಾಧಿಕಾರಿ ಪ್ರದೀಪ ಲಿಂಗದಳ್ಳಿ ಅತಿಥಿಗಳಾಗಿ ಆಗಮಿಸಿದ್ದರು. ಹೈಸ್ಕೂಲ್ ವಿಭಾಗದ ಪ್ರಾಚಾರ್ಯ ಜೆ.ಎಂ ಇನಾಮದಾರ. ಪ್ರಾಥಮಿಕ ವಿಭಾಗದ ಮುಖ್ಯ ಶಿಕ್ಷಕಿ ಶ್ರೀಮತಿ ಅನಸೂಯ ಅಮರನ್ನವರ, ಪ್ರಾಥಮಿಕ ವಿಭಾಗದ ಆಡಳಿತಾಧಿಕಾರಿ ಜಿ ಎಮ್ ಕಟ್ಟಿ ಹಾಗೂ ಪಾಲಕರು, ಗುರುಗಳು ಗುರು ಮಾತೆಯರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸೇವಾ ಮನೋಧರ್ಮದ ಔಷಧ ವ್ಯಾಪಾರ :ಆರ್.ಪರಶುರಾಮ

**ಉದಯರಶ್ಮಿ ನ್ಯೂಸ್**




ಆಲಮಟ್ಟಿ: ಔಷಧ ವ್ಯಾಪಾರವು ಸೇವಾ ಮನೋಧರ್ಮ ವ್ಯಾಪಾರವಾಗಿದ್ದು, ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಔಷಧ ವ್ಯಾಪಾರಿಗಳ ಪಾತ್ರ ಮಹತ್ವದ್ದಾಗಿದೆ. ಆದ್ದರಿಂದ ಔಷಧ ವ್ಯಾಪಾರಿಗಳು ಬಹು ಎಚ್ಚರಿಕೆಯಿಂದ ವಹಿವಾಟು ನಡೆಸಬೇಕು ಎಂದು ವಿಜಯಪುರದ ಸಹಾಯಕ ಔಷಧ ನಿಯಂತ್ರಕ ಆರ್. ಪರಶುರಾಮ ಹೇಳಿದರು.

ಭಾನುವಾರ, ಇಲ್ಲಿಂಯ ಸಮುದಾಯ ಭವನದಲ್ಲಿ ಜರುಗಿದ ವಿಜಯಪುರ ಜಿಲ್ಲಾ ಔಷಧ ವ್ಯಾಪಾರಸ್ಥರ ಸಂಘದ ವಾರ್ಷಿಕ ಸರ್ವಸಾಧಾರಣ ಸಭೆ ಹಾಗೂ ಔಷಧೀಯ ಕ್ಷೇತ್ರದಲ್ಲಿ ನೂತನ ಆವಿಷ್ಕಾರದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಔಷಧ ಕ್ಷೇತ್ರದಲ್ಲಿ ನಿತ್ಯವೂ ಹೊಸ ಹೊಸ ಸಂಶೋಧನೆಗಳು ನಡೆಯುತ್ತಿರುತ್ತವೆ, ಸಾಕಷ್ಟು ಬದಲಾವಣೆಗಳು ಆಗಿರುತ್ತವೆ, ಅವುಗಳ ಬಗ್ಗೆ ಕಾರ್ಯಾಗಾರ ಏರ್ಪಡಿಸಿರುವುದರಿಂದ ಔಷಧ ವ್ಯಾಪಾರಸ್ಥರಿಗೆ ಪರಿಣಿತಿ ಹೊಂದಲು ಸಹಾಯವಾಗಲಿದೆ ಎಂದರು.


ಸಭೆಯ ಅಧ್ಯಕ್ಷತೆ ವಹಿಸಿದ್ದ ವಿಜಯಪುರ ಜಿಲ್ಲಾ ಔಷಧ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಕೆ.ಆರ್. ಎತ್ತಿನಮನಿ ಮಾತನಾಡಿ, ಆನ್ ಲೈನ್ ನಲ್ಲಿ ಔಷಧ ಮಾರಾಟಕ್ಕೆ ನಿರ್ಬಂಧ ವಿಧಿಸಬೇಕು, ಇದು ಜನರ ಆರೋಗ್ಯದ ಮೇಲೆ ಪರಿಣಾಮ ಉಂಟುಮಾಡಲಿದೆ ಎಂದರು. ಔಷಧ ವ್ಯಾಪಾರಿಗಳ ಹಿತ ಕಾಪಾಡಲು ಸಂಘ ಯಾವಾಗಲೂ ಬದ್ಧವಾಗಿರುತ್ತದೆ ಎಂದರು.

ಸಹಾಯಕ ಔಷಧ ನಿಯಂತ್ರಕಿ ಶ್ವೇತಾ ನಾಗಠಾಣ, ಮನೋವೈದ್ಯಶಾಸ್ತ್ರದ ಪ್ರಾಧ್ಯಾಪಕ ಡಾ ಸಂತೋಷ ರಾಮದುರ್ಗ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಂಕಿತ ಅಧಿಕಾರಿ ಆರ್.ಎಸ್. ಬಿರಾದಾರ, ಔಷಧ ವ್ಯಾಪಾರಸ್ಥರ ಸಂಘದ ಉಪಾಧ್ಯಕ್ಷ ರಮೇಶ ಯಳಮೇಲಿ, ಗೌರವ ಕಾರ್ಯದರ್ಶಿ ಸಂಗಮೇಶ ಗುಡ್ಡೋಡಗಿ, ಡಾ ಸತೀಶ ಘಾಟಗೆ ಮತ್ತಿತರರು ಇದ್ದರು.

ಉತ್ತಮ ಔಷಧ ವ್ಯಾಪಾ–ರಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

# ಕುವೆಂಪು ಸಾಹಿತ್ಯ 20ನೇ ಶತಮಾನದ ಸಾಕ್ಷಿಪ್ರಜ್ಞೆ :ಬಂಡೆ

**ಉದಯರಶ್ಮಿ ನ್ಯೂಸ್**



ಇಂಡಿ: ಕುವೆಂಪುರವರ ಸಾಹಿತ್ಯ 20ನೇ ಶತಮಾನದ ಸಾಕ್ಷಿಪ್ರಜ್ಞೆಯಾಗಿ, 21ನೇ ಶತಮಾನದಲ್ಲೂ ಪ್ರಭಾವಿಯಾಗಿದೆ. ಶ್ರೀಸಾಮಾನ್ಯನನ್ನು ಜಗನ್ಮಾನ್ಯನೆಂದು ನಂಬಿ ಎಲ್ಲ ವಯೋಮಾನದ ಓದುಗರ ಆಸಕ್ತಿ ಅಭಿರುಚಿಗಳನ್ನು ತಣಿಸುವಂತೆ ಆಯಾ ಕಾಲ ಮತ್ತು ಸಂದರ್ಭಗಳಿಗೆ ಸ್ಪಂದಿಸುವ ಸಾಹಿತ್ಯ ಸೃಷ್ಟಿಸಿದ್ದು ಕುವೆಂಪು ಅವರ ವೈಶಿಷ್ಟ್ಯವಾಗಿದೆ ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.

ಶನಿವಾರ ಸಂಜೆ ಇಂಡಿಂ–ಯ ಭೀಮಾಂತರಂಗ ಆನ್ ಲೈನ್ ಸಾಹಿತ್ಯಿಕ–ಸಾಂಸ್ಕೃತಿಕ ಜಗಲಿ ಕೇಂದ್ರದಿಂದ ಹಮ್ಮಿಕೊಂಡ ಉಪನ್ಯಾಸ ಮಾಲಿಕೆ–2 ರಲ್ಲಿ ಕುವೆಂಪು ಮತ್ತು ನಾಟಕಗಳು ಕುರಿತು ಅವರು ಉಪನ್ಯಾಸ ನೀಡಿದರು.

ಕನ್ನಡ ರಂಗಭೂಮಿಗೆ ಕುವೆಂಪುರವರ ಕೊಡುಗೆ ಅನನ್ಯ. ಅವರು ಪಾರಂಪರಿಕ ಪುರಾಣ ಕಥೆಗಳನ್ನು ಸಮಕಾಲೀನ ಅಗತ್ಯಕ್ಕೆ ಅನುಗುಣವಾಗಿ ಮರು ರೂಪಿಸಿ ಕ್ರಾಂತಿಕಾರಕ ಬೆಳವಣಿಗೆಗೆ ಕಾರಣವಾಗಿದ್ದಾರೆ. ಜಲಗಾರ, ಶೂದ್ರ ತಪಸ್ವಿ, ಬೆರಳ್ಗೆ ಕೊರಳ್, ಶ್ಮಶಾನ ಕುರುಕ್ಷೇತ್ರ, ಮಹಾರಾತ್ರಿ ಇಂಥ ನಾಟಕಗಳ ಮೂಲಕ ಪುರಾಣಗಳ ಮರು ವ್ಯಾಖ್ಯಾನ ಮಾಡಿ,ಕನ್ನಡ ಸಾಹಿತ್ಯದ ಬೃಹನ್ಮೂರ್ತಿಯಾಗಿದ್ದಾರೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮಿರಗಿ ಪ್ರೌಢ ಶಾಲಾ ಶಿಕ್ಷಕ ವೈ.ಜಿ. ಬಿರಾದಾರ ಮಾತನಾಡಿ, ಮನುಜ ಮತ, ವಿಶ್ವಪಥ ಎಂಬ ಮಹಾನ್ ಸಂದೇಶದ ಮೂಲಕ ಅಲ್ಪಮಾನವರೆಲ್ಲ ವಿಶ್ವಮಾನವರಾಗಬೇಕೆಂದು ಕರೆಕೊಟ್ಟು, ಅದರಂತೆ ಬದುಕಿದ್ದ ಕುವೆಂಪು ಪ್ರಪಂಚದಲ್ಲಿರುವ ಎಲ್ಲ ಧರ್ಮಗಳ ಎಲ್ಲ ತತ್ವಗಳನ್ನು ಆಳವಾಗಿ ಅಧ್ಯಯನ ಮಾಡಿ, ಅವುಗಳ ಸಾರವನ್ನು ತಮ್ಮ ವ್ಯಕ್ತಿತ್ವದಲ್ಲಿ ಅಳವಡಿಸಿಕೊಂಡವರು ಎಂದು ಹೇಳಿದರು.

ನಾದ ಕೆ.ಡಿ. ಸರಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಸಿ.ಎಂ. ಬಂಡಗರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಖ್ಯಾತ ಸಂಶೋಧಕ ಡಾ. ಚನ್ನಪ್ಪ ಕಟ್ಟಿ, ಗೀತಯೋಗಿ, ಬಸವರಾಜ ಕಿರಣಗಿ, ಶ್ರೀಧರ ಹಿಪ್ಪರಗಿ, ದಾನಯ್ಯ ಮಠಪತಿ, ಡಾ. ಮಂಜುನಾಥ ಕೋಟೆಣ್ಣವರ, ರಾಚು ಕೊಪ್ಪ, ಸುಜಾತಾ ಬೀಳಗಿ, ಸುನೀಲ ಗೌರ, ಸಂಗನಗೌಡ ಹಚಡದ ಸೇರಿದಂತೆ ಅನೇಕ ಸಾಹಿತ್ಯಾಸಕ್ತರು ಉಪಸ್ಥಿತ–ರಿದ್ದರು.

ಶಿಕ್ಷಕಿ ಸರೋಜಿನಿ ಮಾವಿನಮರ ಸ್ವಾಗತಿಸಿ, ಪರಿಚಯಿಸಿದರು. ಶಿಕ್ಷಕಿ ಬಿ.ಸಿ. ಭಗವಂತಗೌಡರ ನಿರೂಪಿಸಿದರು. ಶಿಕ್ಷಕ ವೀರಣ್ಣ ದಸ್ತರೆಡ್ಡಿ ವಂದಿಸಿದರು.

# ದೇವರಹಿಪ್ಪರಗಿ ತಾಲ್ಲೂಕು ಯಥಾ ಸ್ಥಿತಿಯಲ್ಲೇ ಇರಲಿ :ಹರನಾಳ

**ಉದಯರಶ್ಮಿ ನ್ಯೂಸ್**




ದೇವರಹಿಪ್ಪರಗಿ: ದೇವರಹಿಪ್ಪರಗಿ ತಾಲ್ಲೂಕು ವಿಜಯಪುರ ಜಿಲ್ಲೆಯಲ್ಲಿಯೇ ಯಥಾಸ್ಥಿತಿಯಲ್ಲಿ ಇರಲಿ ಇಲ್ಲವೇ ನೂತನ ಜಿಲ್ಲಾ ಕೇಂದ್ರವನ್ನಾಗಿ ಘೋಷಿಸಿ, ಯಾವುದೇ ಕಾರಣಕ್ಕೂ ನೂತನ ಸಂಭಾವ್ಯ ಜಿಲ್ಲೆಗೆ ಬೇಡ ಎಂದು ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಸಂಗನಗೌಡ ಹರನಾಳ ತಿಳಿಸಿದ್ದಾರೆ.

ದೇವರಹಿಪ್ಪರಗಿ ಪಟ್ಟಣವು ಭೌಗೋಳಿಕವಾಗಿ ಮಧ್ಯವರ್ತಿ ಸ್ಥಳವಾಗಿದ್ದು, ಎರಡು ಹೆದ್ದಾ–ರಿಗಳನ್ನು ಒಳಗೊಂಡಿದೆ. ಕಲಬುರಗಿ–ವಿಜಯಪುರ ಮಧ್ಯದ ರಾಷ್ಟ್ರೀಯ ಹೆದ್ದಾರಿ–50 ಹಾಗೂ ಲಿಂಗಸಗೂರು–ಶಿರಾಡೋಣ ರಾಜ್ಯಹೆದ್ದಾರಿ–41 ರ ಮೂಲಕ ಸಿಂದಗಿ ಇಂಡಿ, ವಿಜಯಪುರ ಪಟ್ಟಣಗಳೊಂದಿಗೆ ನೇರ ಸಂಪರ್ಕ ಹೊಂದಿದೆ. ಜೊತೆಗೆ ಬಸವನ ಬಾಗೇವಾಡಿ, ತಾಳಿಕೋಟೆ ತಾಲ್ಲೂಕುಗಳೊಂದಿಗೆ ಗಡಿ ಹಂಚಿಕೊಂಡಿದ್ದು, ಅಲ್ಲದೇ ನೂತನ ವಿಜಯಪುರ ವಿಮಾನ ನಿಲ್ದಾಣಕ್ಕೆ ಹತ್ತಿರದಲ್ಲಿದೆ. ಸಾರ್ವಜನಿಕರ ಪ್ರಯಾಣಕ್ಕೆ ಉತ್ತಮ ರಸ್ತೆ, ಸಾಕಷ್ಟು ಸೌಲಭ್ಯಗಳನ್ನು ಹೊಂದಿದೆ.

ರಾಜ್ಯ ಸರಕಾರ ನೂತನ ಜಿಲ್ಲಾ ಕೇಂದ್ರ ಸೃಜಿಸಲು ಮುಂದಾದರೆ ದಯವಿಟ್ಟು ದೇವರಹಿಪ್ಪರಗಿಯನ್ನು ಪರಿಗಣಿಸಬೇಕು. ಅದನ್ನು ಜಿಲ್ಲಾ ಕೇಂದ್ರ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು ಎಂದು ಜಿಲ್ಲಾಡಳಿತ ಹಾಗೂ ಇಂಡಿ ಉಪವಿಭಾಗಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

# ನಿಧಾ ಹೊನ್ನುಟಗಿ ರಾಜ್ಯಮಟ್ಟಕ್ಕೆ ಆಯ್ಕೆ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಪಟ್ಟಣದ ಸರ್ಕಾರಿ ಉರ್ದು ಪ್ರೌಢಶಾಲೆಯ ವಿದ್ಯಾರ್ಥಿನಿ ನಿಧಾ ಹೊನ್ನುಟಗಿ ಇತ್ತೀಚಿಗೆ ತಿಕೋಟಾದಲ್ಲಿ ಜರುಗಿದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂ–ಜಿಯ ಉರ್ದು ಮಾಧ್ಯಮದ ಭಾಷಣ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ವಿದ್ಯಾರ್ಥಿನಿಯ ಸಾಧನೆಗೆ ಪ್ರೌಢಶಾಲಾ ಮುಖ್ಯಗುರು, ಎಲ್ಲ ಶಿಕ್ಷಕರು ಹಾಗೂ ಎಸ್‌ಡಿ–ಎಮ್‌ಸಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಅಭಿನಂದಿಸಿದ್ದಾರೆ.

# ಮಾದಿಗ ಸಮಾಜದ ಹಿಂದುಳಿಯುವಿಕೆಗೆ ಬಡತನ ಕಾರಣ




**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಎಸ್‌ಟಿಪಿ/ಟಿಎಸ್‌ಪಿ ಯೋಜನೆಯಲ್ಲಿ ಬರುವ ಅನುದಾನವನ್ನು ಬಳಸಿಕೊಂಡು ಮಾದಿಗ ಸಮಾಜದ ಯುವಕರು ಉದ್ಯೋಗಸ್ಥರಾಗಿ ಸುಂದರ ಜೀವನವನ್ನು ನಡೆಸಬೇಕೆಂದು ನಿವೃತ್ತ ಪ್ರಿನ್ಸಿಪಲ್ ಭಾರತ ಸರ್ಕಾರದ ನಾಗಪುರ ವಲಯದ ಕೇಂದ್ರೀಯ ಹಣಕಾಸು ಆದಾಯ ತೆರಿಗೆ ಕಮಿಷನರ್ ಎಚ್. ಆರ್.ಭೀಮಾಶಂಕರ ಆಯ್‌ಆರ್‌ಎಸ್ ಹೇಳಿದರು.

ಪಟ್ಟಣದ ಗಣೇಶ ನಗರದ ಮಸಬಿನಾಳ ರಸ್ತೆಯಲ್ಲಿರುವ ಯಲ್ಲಾಲಿಂಗಮಠದಲ್ಲಿ ಜಿಲ್ಲಾ ಮಾದಿಗ ನೌಕರರ ಕ್ಷೇಮಾಭಿವೃದ್ಧಿ ಸಂಘ, ಬಸವನಬಾಗೇವಾಡಿ ತಾಲೂಕಾ ಘಟಕದ ನೇತೃತ್ವದಲ್ಲಿ 2022–23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿ.ಯು.ಸಿ, ಹಾಗೂ 2023–24ನೇ ಸಾಲಿನಲ್ಲಿ ವೈದ್ಯಕೀಯ ಹಾಗೂ ಇಂಜಿನೀಯ–ರಿಂಗ್ ಕೋರ್ಸ್ಗೆ ಆಯ್ಕೆಯಾದದವ–ರಿಗೆ ಪ್ರತಿಭಾ ಪುರಸ್ಕಾರ ಹಾಗೂ ಪುರಸಭೆ, ಪಪಂ,ಗ್ರಾಪಂಗಳಲ್ಲಿ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯರಿಗೆ ಹಾಗೂ ಹೊಸದಾಗಿ ಸರ್ಕಾರಿ ನೌಕರಿಗೆ ಸೇರಿದ ಹಾಗೂ ನಿವೃತ್ತಿ ಹೊಂದಿದ ಸಮಾಜದ ನೌಕರರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಾದಿಗ ನೌಕರರ ಕ್ಷೇಮಾಭಿವೃದ್ಧಿಯಿಂದ ಸಮಾಜದಲ್ಲಿರುವ ಬಡ–ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗುರುತಿಸಿ ಅವರಿಗೆ ಪ್ರತಿಭಾ ಪುರಸ್ಕಾರ ಮಾಡುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ, ನಾವು ಸ್ವಾಭಿಮಾನದಿಂದ ಬದುಕುವ ಮಂದಿ, ಸಮಾಜಕ್ಕೆ ಬಡತನವೇ ಮೂಲ ಕಾರಣವಾಗಿದೆ, ಇದನ್ನು ಮೆಟ್ಟಿನಿಂತು ಸಮಾಜದ ಶ್ರೇಯೋಭಿವೃದ್ಧಿಗೆ ಪ್ರತಿಯೊಬ್ಬರು ಕೈಜೋಡಿಸಬೇಕು, ಸಮಾಜಕ್ಕೆ ಸಿಗುವ ಪಾಲು ಮತ್ತೊಬ್ಬರು ಪಾಲಾಗುತ್ತಿದೆ, ನಾವು ಒಗ್ಗಟಾಗಿ ಸಂಘಟಿತರಾದಾಗ ಮಾತ್ರ ಸಮಾಜಕ್ಕೆ ಬರುವ ಪಾಲು ನಮ್ಮದಾಗಿಸಿಕೊಳ್ಳಲು ಸಾಧ್ಯ ಎಂದು ಹೇಳಿದರು.

ಕೂಡಗಿ ಗ್ರಾಪಂ ಅಧ್ಯಕ್ಷೆ ಮಲ್ಲಮ್ಮ ಪೂಜಾರಿ ಮಾತನಾಡಿ, ಮಕ್ಕಳ ಶಿಕ್ಷಣದ ಬಗ್ಗೆ ಮೊದಲು ತಂದೆ–ತಾಯಿಗಳೆ ಕಾಳಜಿವಹಿಸಬೇಕು, ಉತ್ತಮ ಶಿಕ್ಷಣ ನೀಡುವುದರೊಂದಿಗೆ ಸಂಸ್ಕಾರವಂತ ಶಿಕ್ಷಣ ನೀಡುವುದು ಅವಶ್ಯಕತೆಯಿದೆ, ನಮ್ಮ ದುಡಿಮೆಯಿಂದ ಬಂದ ಹಣ ಮಕ್ಕಳ ಶ್ರೇಯೋಭಿವೃದ್ಧಿಗೆ ಮೀಸಲಾಗಿ ಇಡಬೇಕು, ನಾವು ಮಕ್ಕಳನ್ನು ಆಸ್ತಿಯಾಗಿ ಮಾಡಿಕೊಳ್ಳಬೇಕು ಎಂದು ಹೇಳಿದರು.

ವಿಜಯಪುರದ ಉಪನ್ಯಾಸಕ ಎಚ್.ಎಲ್.ದೊಡಮನಿ ಉಪನ್ಯಾಸ ನೀಡಿ, ಸನ್ಮಾನ ಸತ್ಕಾರಗಳು ನಮ್ಮ ಜವಾಬ್ದಾರಿಯನ್ನು ಹೆಚ್ಚಿಸುತ್ತವೆ, ನಮ್ಮಲ್ಲಿರುವ ಕೀಳರಿಮೆಯನ್ನು ಕಿತ್ತು ಬೀಸಾಕಿ ನಾವು ಮುಂದೆ ಬರಬೇಕು, ನಮ್ಮ ಗುರಿ ಮುಟ್ಟಲು ಸತತ ಪ್ರಯತ್ನದಲ್ಲಿರಬೆಕು, ನಾವು ಯಾವಾಗಲು ಸೋಲನ್ನು ಒಪ್ಪಿಕೊಳ್ಳಬಾರದೆಂದು ಹೇಳಿದರು.

ತಾಲೂಕಾ ಮಾದಿಗ ನೌಕರರ ಕ್ಷೇಮಾಭಿವೃದ್ಧಿ ಸಂಘದ ತಾಲೂಕಾಧ್ಯಕ್ಷ ಕೆ.ಎಂ.ಬೇಲಿ, ಅನ್ನಪೂರ್ಣ ಕಲ್ಯಾಣಿ, ಶರಣು ದೊಡಮನಿ, ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಶ್ರೀಶೈಲ ದೊಡಮನಿ, ವಸಂತ ಕಲ್ಯಾಣಿ, ರಾಜು ಬಸರಕೋಡ, ಬಸವರಾಜ ಕಲ್ಯಾಣಿ, ಶರಣಪ್ಪ ಮಾದರ, ಎಸ್.ಎಲ್.ಓಂಕಾರ, ಮುತ್ತುರಾಜ ಹೆಬ್ಬಾಳ, ಎಂ.ವಾಯ್. ಕಳ್ಳಿಮನಿ, ಅರ್ಜುನ ಗಂಗಾಧರ, ವಾಯ್.ಬಿ.ಧರ್ಮಗಿರಿ, ಬಸಗೊಂಡಪ್ಪ ಹಾದಿಮನಿ, ಅಶೋಕ ಕರೆಕಲ್ಲ, ರೇಣುಕಾ ಭಾವಿಕಟ್ಟಿ, ಜಿ.ಬಿ.ಕಲ್ಯಾಣಿ ಸೇರಿದಂತೆ ಇತರರು ಇದ್ದರು.

ಸಿ.ಟಿ.ಮಾದರ ಪ್ರಾಸ್ತಾವಿಕ ಮಾತನಾಡಿದರು. ಪವಿತ್ರಾ ಮುಕಾರ್ತಿಹಾಳ ನಿರೂಪಿಸಿದರು, ಶರಣು ದೊಡಮನಿ ಸ್ವಾಗತಿಸಿದರು. ಪಿ.ಬಿ.ದೊಡಮನಿ ವಂದಿಸಿದರು.

# ಎಸ್ಸೆಸ್ಸೆಲ್ಸಿ ಮಕ್ಕಳಿಗೆ ಪ್ರಶ್ನೆ ಕೋಟಿ ಬಿಡುಗಡೆ




**ಉದಯರಶ್ಮಿ ನ್ಯೂಸ್**

ವಿಜಯಪುರ: ಎಸ್. ಎಸ್. ಎಲ್. ಸಿ. ಮಕ್ಕಳಿಗೆ ಪರೀಕ್ಷೆಯಲ್ಲಿ ಉತ್ತೀರ್ಣವಾಗಲು ಹಾಗೂ ಉತ್ತಮ ಅಂಕಗಳನ್ನು ಗಳಿಸಲು ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ನಾನು ಪಾಸ್ ಆಗುವೆ ಎನ್ನುವ ಶೀರ್ಷಿಕೆ ಅಡಿಯಲ್ಲಿ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಹೆಚ್ಚಿನ ಅಂಕಗಳನ್ನು ಗಳಿಸಲು ಅನುಕೂಲವಾಗುವಂತೆ, ನಾನೇ ಓದುವೆ ಎನ್ನುವ ಶೀರ್ಷಿಕೆ ಅಡಿಯಲ್ಲಿ ವಿಜಯಪುರ ಗ್ರಾಮೀಣ ವಲಯದ ವಿಷಯ ಸಂಪನ್ಮೂಲ ಶಿಕ್ಷಕರು ಸೇರಿ ರಚಿಸಿರುವ ಪ್ರಶ್ನೆ ಕೋಟಿಯನ್ನು ವಿಜಯಪುರ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗ ಕೆ. ಹೊಂಗಯ್ಯ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಮೋದಿನಿ ಬಳೋಲಮಟ್ಟಿ ಅವರು ಹಾಗೂ ಸಂಪನ್ಮೂಲ ಶಿಕ್ಷಕರೊಂದಿಗೆ ಪ್ರಶ್ನೆ ಭಂಡಾರವನ್ನು ಬಿಡುಗಡೆಗೊಳಿಸಿದರು.

ಈ ಪ್ರಶ್ನೆಗಳ ಸಂಗ್ರಹವನ್ನು ವಲಯದ ಎಲ್ಲಾ ಪ್ರೌಢಶಾಲೆಯ ಮುಖ್ಯ ಗುರುಗಳು ಮಕ್ಕಳಿಗೆ ತಲುಪುವಂತೆ ಕ್ರಮ ವಹಿಸಲು ಕೆ. ಹೊಂಗಯ್ಯ ಅವರು ತಿಳಿಸಿದರು.

# ನಾನ್ಯಾರು ನನ್ನವರು ಯಾರು'? ಕವನ ಸಂಕಲನ ಬಿಡುಗಡೆ




**ಉದಯರಶ್ಮಿ ನ್ಯೂಸ್**

ವಿಜಯಪುರ: ಕವಿಯ ಭಾಷೆಯ ಒಳಗಿನ ಪಲ್ಲಟಗಳು ಕವಿತೆಯ ರೂಪ ಮತ್ತು ವಸ್ತುವಿನಲ್ಲೂ ಹುಡುಕಾಟ, ವಿನಾಶಕಾರಿ ಕ್ರಮಗಳು, ಚಿಂತೆಗಳು, ಮಾನವ ಜನಾಂಗದ ಆರೋಗ್ಯ ಮತ್ತು ಮನಸ್ಸನ್ನು ಕೇಂದ್ರಿಕರಿಸುವ ಆಲೋಚನೆಗೆ ಲೇಖಕರು ಸಾಮಾನ್ಯ ಮೌಲ್ಯಗಳ ಅರ್ಥಪೂರ್ಣತೆಗಾಗಿ ಕವನಗಳು ಶ್ರೇಷ್ಟತೆಯನ್ನು ಪಡೆಯುತ್ತವೆ ಎಂದು ಡಾ. ಮಲ್ಲಿಕಾರ್ಜುನ ಮೇತ್ರಿ ಹೇಳಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗ ಮಂದಿರದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಭೀಮಣ್ಣ ಸ.ಬಜಂತ್ರಿ ಅವರ 'ನಾನ್ಯಾರು ನನ್ನವರು ಯಾರು'? ಆಧುನಿಕ ವಚನ ಸಂಕಲನ ಕೃತಿ ಪರಿಚಯ ಮಾಡುತ್ತ ಸಂಕಲನದಲ್ಲಿ ಅಂತರಂಗದ ಶೋಧನೆ, ಮನೋವೈಜ್ಞಾನಿಕ ಚಿಂತನೆ, ಆಧ್ಯಾತ್ಮಿಕ ಚಿಂತನೆ ಬದುಕಿನ ಸಂಬಂಧ ಇವೆಲ್ಲವೂ ಬದುಕಿನ ಸಿಹಿ–ಕಹಿ ಅನುಭವಗಳನ್ನು ಪ್ರೀತಿಯಿಂದ ಎಲ್ಲವೂ ಭಾವನಾತ್ಮಕವಾಗಿ ತೆರೆದುಕೊಳ್ಳುತ್ತಿವೆ. ಸಂಕಲನ ಕನ್ನಡ ಸಾಹಿತ್ಯಕ್ಕೆ ನೆಮ್ಮದಿ ಹಾಗೂ ಭರವಸೆಯ ಕೃತಿ ಎಂದರು.

ಜಿಲ್ಲಾ ಶಿಕ್ಷಣಾಧಿಕಾರಿ ಡಾ. ಎ. ಎಮ್.ಲಿಮಕರ ಮಾತನಾಡುತ್ತ, ಸಾಮಾಜಿಕ ವ್ಯವಸ್ಥೆಯ ಕರಾಳತೆಯ ಬಗ್ಗೆ ಸುತ್ತಲಿನ ಬದುಕಿನಲ್ಲಿ ನಡೆಯುವ ವಿದ್ಯಮಾನಗಳು, ಮೌಢ್ಯತೆ, ಅನಿಷ್ಟಗಳ ಬಗೆಗೆ ಅರಿವು ಮೂಡಿಸುವ ಕೃತಿ ಎಂದು ಹೇಳಿದರು. ಆರ್.ಪಿ.ಚವ್ಹಾಣ, ಅಕ್ಷಯ ನಾಗೇಶಿ ಮಾತನಾಡಿದರು. ಸಂಗಮೇಶ ಸ್ವಾಮಿಜಿ ಸಾನಿಧ್ಯ ವಹಿಸಿದ್ದರು. ಜಿಲ್ಲಾ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲೀಕಾರ ಅಧ್ಯಕ್ಷತೆ ವಹಿಸಿದ್ದರು.

ಪ್ರೊ.ದೊಡ್ಡಣ್ಣ ಬಜಂತ್ರಿ ಸ್ವಾಗತಿಸಿದರು. ಪ್ರಭು ಕೊಟ್ಯಾಳ ವಂದಿಸಿದರು ಸಂಗಮೇಶ ಬದಾಮಿ ಕಾರ್ಯಕ್ರಮ ನಿರ್ವಹಿಸಿದರು.

ಡಾ. ಬಾಲಾಜಿ ಕೃತಿ ಬಿಡುಗಡೆಗೊಳಿಸಿದರು. ಕಾರ್ಯಕ್ರಮದಲ್ಲಿ ಡಾ. ಜಾವೇದ ಜಮಾದಾರ, ಮಲ್ಲಿಕಾರ್ಜುನ ಭಜಂತ್ರಿ, ಡಿ.ಎಮ್.ಬಜಂತ್ರಿ, ಚಂದ್ರಶೇಖರ ಹೊಸಮನಿ, ಗೋವಿಂದ ವಾಜಂತ್ರಿ ಎ.ಡಿ.ಮುಲ್ಲಾ, ಬಿ.ವಿ.ಪಾಟೀಲ, ಎಮ್.ಬಿ.ಕುಚನೂರ, ಪಿ.ಎ.ಆಸಂಗಿ, ಎನ್.ಕೆ.ಮನಗೊಂಡ. ಕೃಷ್ಣ ಬಜಂತ್ರಿ, ಶ್ರೀಮಂತ ಬಜಂತ್ರಿ, ಯಮನಪ್ಪ ಬಜಂತ್ರಿ, ಸದಾಶಿವ ಬಜಂತ್ರಿ, ವಿಜಯ ಮಾನೆ, ಮಲ್ಲನಗೌಡ ಬಿರಾದಾರ, ಸಾದೀಕ್ ಉಸ್ತಾದ, ಪ್ರಕಾಶಕರಾದ ಮಹೇಂದ್ರ ಬಿ.ಜಾಧವ ಮತ್ತು ರಾಜೇಂದ್ರ ಬಿ.ಜಾಧವ ಉಪಸ್ಥಿತ–ರಿದ್ದರು.

ಕಾರ್ಯಕ್ರಮದಲ್ಲಿ ಲೇಖಕ ಭೀಮಣ್ಣ ಬಜಂತ್ರಿ ಅವರಿಗೆ ಸ್ನೇಹಿತರು, ಹಿತೈಷಿಗಳು, ಸನ್ಮಾನಿಸಿ ಸತ್ಕರಿಸಿದರು.

ತೊರವಿಯಲ್ಲಿ ಜ.10ರಿಂದ 18ರವರೆಗೆ ಜರುಗುವ ಸಂಕ್ರಮಣ ಸಿದ್ದೇಶ್ವರ ಜಾನುವಾರು ಜಾತ್ರೆ

# ಜಾನುವಾರು ಜಾತ್ರೆ ವ್ಯವಸ್ಥಿತ ಆಯೋಜನೆಗೆ ಸಚಿವರ ಸೂಚನೆ

ಉದಯರಶ್ಮಿ ನ್ಯೂಸ್

ವಿಜಯಪುರ: ಪ್ರತಿ ವರ್ಷದಂತೆ ವಿಜಯಪುರ ತಾಲೂಕಿನ ತೊರವಿಯಲ್ಲಿ ಜ.10ರಿಂದ 18ರವರೆಗೆ ಜರುಗುವ ಸಂಕ್ರಮಣ ಸಿದ್ದೇಶ್ವರ ಜಾನುವಾರು ಜಾತ್ರೆಯನ್ನು ಅತ್ಯಂತ ವ್ಯವಸ್ಥಿತವಾಗಿ ಆಯೋಜಿಸುವಂತೆ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಸಿದ್ದೇಶ್ವರ ಜಾನುವಾರು ಜಾತ್ರೆ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಜಾನುವಾರು ಜಾತ್ರೆಯಲ್ಲಿ ಗಡಿ ಭಾಗವಾಗಿರುವುದ-ರಿಂದ ಮಹಾರಾಷ್ಟ್ರ ಸೇರಿದಂತೆ ವಿವಿಧ ಭಾಗಗಳಿಂದ ಸಾವಿರಾರು ರೈತರು, ಜಾನುವಾರುಗಳು ಆಗಮಿಸಲಿರುವುದ-ರಿಂದ ಸೂಕ್ತ ಲಸಿಕಾಕರಣ, ಜಾತ್ರೆಯಲ್ಲಿ ಭಾಗವಹಿಸಿದ ರೈತರಿಗೆ ನಿರಂತರವಾಗಿ ಕುಡಿಯುವ ನೀರಿನ ವ್ಯವಸ್ಥೆ, ಜಾತ್ರೆ ಸ್ಥಳದಲ್ಲಿ ಸ್ವಚ್ಛತೆ, ಒಂದು ವಾರಗಳ ಕಾಲಕ್ಕೂ ಹೆಚ್ಚಿನ ದಿನ ಜಾತ್ರೆ ನಡೆಯುವುದರಿಂದ ಸಮರ್ಪಕ ವಿದ್ಯುತ್ ವ್ಯವಸ್ಥೆ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಂಡು ಯಾವುದೇ ಅಡೆ-ತಡೆವಾಗದಂತೆ ನೋಡಿಕೊಂಡು ವ್ಯವಸ್ಥಿತವಾಗಿ ಜಾತ್ರೆ ಆಯೋಜಿಸುವಂತೆ ಅವರು ಸೂಚನೆ ನೀಡಿದರು.

ಜಾತ್ರೆಯಲ್ಲಿ ಅಂದಾಜು 50 ರಿಂದ 60 ಸಾವಿರ ಜಾನುವಾರುಗಳಿಗೆ ಬರುವ ಸಾಧ್ಯತೆ ಇರುವುದರಿಮದ ಜಾನುವಾರುಗಳಿಗೆ ರೋಗ ನಿರೋಧ ಲಸಿಕೆ ನೀಡಲು, ಸುಮಾರು 50 ಜನ ಪಶುವೈದ್ಯಕೀಯ ಪದವೀಧರರನ್ನು ಆಹ್ವಾನಿಸಿ ಅವರಿಂದ ಜಾನುವಾರುಗಳಿಗೆ ವ್ಯವಸ್ಥಿತವಾಗಿ ಕಟ್ಟಲು ಹಾಗೂ ಹೊಸ ಹೊಸ ತಳಿಯ ಜಾನುವಾರುಗಳ ಪ್ರದರ್ಶನ ಹಾಗೂ ಜಾತ್ರೆಯಲ್ಲಿ ವಿವಿಧ ವಸ್ತು ಪ್ರದರ್ಶನ ಮಳಿಗೆಗಳ ಆಯೋಜನೆಗೆ ಅವರು ಸೂಚಿಸಿದರು.

ಒಂದು ವಾರಕ್ಕೂ ಹೆಚ್ಚಿನ ಕಾಲ ಜಾತ್ರೆ ನಡೆಯುವುದ-ರಿಂದ ಚಳಿಗಾಲವಿರುವುದರಿಂದ ಜಾನುವಾರುಗಳಿಗೆ ರೋಗ-ರುಜಿನಗಳು ಬರುವ ಸಾಧ್ಯತೆ ಇರುತ್ತದೆ. ಮುಂಜಾಗ್ರತಾ ಕ್ರಮವಾಗಿ ಲಸಿಕೆ, ಔಷಧಿಗಳ ವ್ಯವಸ್ಥೆ ಮಾಡಿಟ್ಟುಕೊಳ್ಳಬೇಕು. ಸೂಕ್ತ ವೈದ್ಯೋಪಚಾರಕ್ಕೆ ಪಶು ವೈದ್ಯಾಧಿಕಾರಿಗಳನ್ನು ನೇಮಿಸಿ, 3 ತಂಡಗಳನ್ನು ರಚಿಸಿ ವೈದ್ಯಕೀಯ ಸೇವೆ ಒದಗಿಸಬೇಕು. ಅತಿ ಹೆಚ್ಚು ಜನರು ಭಾಗವಹಿಸುವುದ-ರಿಂದ ಸಾರ್ವಜನಿಕರು, ರೈತರ ಅನುಕೂಲಕ್ಕಾಗಿ ಆರೋಗ್ಯ ತಪಾಸಣಾ ಕೇಂದ್ರ, ಜಾನುವಾರು ಜಾತ್ರೆಯಲ್ಲಿ ಜಾನುವಾರುಗಳಿಗೆ ರೋಗಗಳು ಹರಡುವ ಸಾಧ್ಯತೆ ಇರುವ ಹಿನ್ನಲೆಯಲ್ಲಿ ಔಷಧಿ ಸಿಂಪರಣೆ (ಫಾಗಿಂಗ್) ಹಾಗೂ ಜಾತ್ರೆಯಲ್ಲಿ ದಿನನಿತ್ಯ ಶೇಖರಣೆಯಾಗುವ ಕಸವನ್ನು ತೆರವುಗೊಳಿಸಿ, ಸ್ವಚ್ಛತೆ ಕಾಪಾಡುವುದು ಸೇರಿದಂತೆ ಮಹಾನಗರ ಪಾಲಿಕೆಯಿಂದ ಪಬ್ಲಿಕ್ ಮೊಬೈಲ್



ಶೌಚಾಲಯ ವ್ಯವಸ್ಥೆ, ಹೆಸ್ಕಾಂದಿಂದ ತಾತ್ಕಾಲಿಕವಾಗಿ ವಿದ್ಯುತ್ ವ್ಯವಸ್ಥೆ, ಬೀದಿ ದೀಪಗಳ ಅಳವಡಿಕೆ ಸೇರಿದಂತೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚಿಸಲಾಯಿತು.

ಜಾನುವಾರು ಜಾತ್ರೆಗೆ ಹೋಗಿ ಬರಲು ಅನುಕೂಲವಾಗುವಂತೆ ಕೇಂದ್ರ ಬಸ್ ನಿಲ್ದಾಣದಿಂದ ಸೂಕ್ತ ಸಾರಿಗೆ ವ್ಯವಸ್ಥೆ, ಮುಖ್ಯ ರಸ್ತೆಯಿಂದ ಜಾನುವಾರು ಜಾತ್ರೆ ಸ್ಥಳಕ್ಕೆ ಹೋಗುವ ರಸ್ತೆಯನ್ನು ಸುಗಮಗೊಳಿಸಿ, ಜಾತ್ರೆ ಹೋಗುವ ರೈತರಿಗೆ ಅನುಕೂಲ ಕಲ್ಪಿಸುವುದು, ಮುಂಜಾಗ್ರತಾ ಕ್ರಮವಾಗಿ ಅಗ್ನಿಶಾಮಕ ವಾಹನ ನಿಲುಗಡೆ, ಪೋಲಿಸ್ ಬಂದೋಬಸ್ತ, ಹಾಗೂ ಪ್ರತಿ ದಿನ ಸಂಜೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸಾಂಸ್ಕೃತಿ ಕಾರ್ಯಕ್ರಮಗಳ ಆಯೋಜನೆ ಹಾಗೂ ಜಾನುವಾರುಗಳ ಮಾರಾಟದ ನಂತರ ರಸೀದಿ ನೀಡುವ ಸಂದರ್ಭದಲ್ಲಿ ಜಾನುವಾರುಗಳನ್ನು ಮಾರಾಟ ಮಾಡುವವರು ಹಾಗೂ ಕೊಳ್ಳುವವರ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ, ಆಧಾರ ಸಂಖ್ಯೆ ಪಡೆದುಕೊಳ್ಳುವಂತೆ ಮತ್ತು ಮುಂಜಾಗ್ರತಾ ಕ್ರಮವಾಗಿ ಮದ್ಯ ಮಾರಾಟ ನಿಷೇಧಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೊನಾವಣೆ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ಮಹಾನಗರ ಪಾಲಿಕೆ ಆಯುಕ್ತ ಬದ್ರೂದ್ದಿನ ಸೌದಾಗರ, ಉಪವಿಭಾಗಾಧಿಕಾರಿ ಬಸವಣ್ಣೆಪ್ಪ ಕಲಶೆಟ್ಟಿ, ತಹಶೀಲ್ದಾರ ಶ್ರೀಮತಿ ಕವಿತಾ ಆರ್. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಶ್ರೀಮತಿ ಎಂ.ವಿ.ಶೈಲಜಾ, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ.ಅಶೋಕ ಘೋಣಸಗಿ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ನಾರಾಯಣಗೌಡ ಬಿಡುಗಡೆಗೆ ಕಾರ್ಯಕರ್ತರ ಸಂತಸ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಕರವೇ ರಾಜ್ಯಾಧ್ಯಕ್ಷ ನಾರಾಯಣಗೌಡ ಅವರನ್ನು ಬಿಡುಗಡೆ ಮಾಡುವ ಸುದ್ದಿ ತಿಳಿಯುತ್ತಿದ್ದಂತೆ ಕರವೇ ಜಿಲ್ಲಾ ಯುವ ಘಟಕದ ಅಧ್ಯಕ್ಷ ಅಶೋಕ ಹಾರಿವಾಳ ನೇತೃತ್ವದಲ್ಲಿ ಸೋಮವಾರ ರಾತ್ರಿ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಪಟಾಕ್ಷಿ ಸಿಡಿಸಿ, ಸಿಹಿ ಹಂಚಿ ಸಂತಸ ಪಟ್ಟರು.

ಈ ಸಂದರ್ಭದಲ್ಲಿ ಅಶೋಕ ಹಾರಿವಾಳ ಮಾತನಾಡಿ, ವಾಣಿಜ್ಯ ಮಳಿಗೆಗಳ ನಾಮಫಲಕಗಳಲ್ಲಿ ಕನ್ನಡ ಕಡ್ಡಾಯಕ್ಕೆ ಆಗ್ರಹಿಸಿ ಬೆಂಗಳೂರಿನಲ್ಲಿ ಈಚೆಗೆ ನಾರಾಯಣಗೌಡ ಅವರ ನೇತೃತ್ವದಲ್ಲಿ ದೊಡ್ಡ ಪ್ರಮಾಣದಲ್ಲಿ ಹೋರಾಟ ನಡೆದಿತ್ತು. ಈ ಸಂದರ್ಭದಲ್ಲಿ ನಮ್ಮ ಸಂಘಟನೆಯ ರಾಜ್ಯಾಧ್ಯಕ್ಷ ನಾರಾಯಣಗೌಡ ಸೇ-ರಿದಂತೆ 29 ಜನರನ್ನು ಏಕಾಏಕಿ ಬಂಧಿಸಲಾಗಿತ್ತು. ಇದೀಗ ಅವರಿಗೆ ಬಿಡುಗಡೆ ಭಾಗ್ಯ ದೊರೆತಿರುವುದು ನಮ್ಮ ಎಲ್ಲ ಕಾರ್ಯಕರ್ತರಿಗೆ ಸಂತಸ ತಂದಿದೆ. ನಮ್ಮ ಸಂಘಟನೆಯ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ. ಕನ್ನಡ ನಾಡಿನಲ್ಲಿ ಕನ್ನಡ ಭಾಷೆ ರಕ್ಷಣೆಗಾಗಿ ನಿರಂತರವಾಗಿ ಹೋರಾಟ ಮಾಡುತ್ತಿರುವ ನಾರಾಯಣಗೌಡ ಅವರಿಗೆ ಯಾವಾಗಲೂ ನಮ್ಮ ಕಾರ್ಯಕರ್ತರು ಬೆಂಬಲವಾಗಿ ಇರುತ್ತಾರೆ ಎಂದರು.

ಈ ಸಂದರ್ಭದಲ್ಲಿ ಬಸವರಾಜ ಹೂಗಾರ, ರವಿ ಗೊಳಸಂಗಿ, ಸುರೇಶ ಜಗದಾಳೆ, ಶ್ರೀಶೈಲ ಹೂಗಾರ, ಮಂಜು ಮಣ್ಣೂರ, ಮಡುಗೌಡ ಭಾವಿಕಟ್ಟಿ, ವಿಶ್ವನಾಥ ಗಬ್ಬೂರ, ಹಣಮಂತ ಟಕ್ಕಳಕಿ, ಸೃಜನ ಫಿರಂಗಿ, ಬಸು ರಾಯಗೊಂಡ, ಶಿವು ಉಕ್ಕಲಿ ಇದ್ದರು.

ಜ.11 - 12ರಂದು ಸಿಂದಗಿ ತಾಲೂಕು ಜಿಲ್ಲೆಯನ್ನಾಗಿ ರಚಿಸಬೇಕೆಂದು ಮನವಿ ಸಲ್ಲಿಕೆ

# ಸಿಎಂ ಭೇಟಿಗೆ ನಿಯೋಗ ಹೋಗಲು ನಿರ್ಧಾರ :ಶಾಸಕ ಮನಗೂಳಿ

ಉದಯರಶ್ಮಿ ನ್ಯೂಸ್

ಸಿಂದಗಿ: ತಾಲೂಕನ್ನು ಜಿಲ್ಲೆಯನ್ನಾಗಿ ಮಾಡುವ ನಿಟ್ಟಿನಲ್ಲಿ ಪ್ರಾರಂಭವಾದ ಈ ಹೋರಾಟದ ಹಿನ್ನೆಲೆಯಲ್ಲಿ ಬರುವ ಜ.11 ಅಥವಾ 12ರಂದು ಸಿಎಂ ಭೇಟಿಗಾಗಿ ನಿಯೋಗ ಹೋಗಲು ನಿರ್ಧಾರ ಮಾಡಲಾಗಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.



ನಗರದ ಬಸವ ಮಂಟಪದಲ್ಲಿ ಭಾನುವಾರ ಸಾಯಂಕಾಲ ಹಮ್ಮಿಕೊಂಡ ಸಿಂದಗಿಯನ್ನು ಜಿಲ್ಲೆಯನ್ನಾಗಿ ಮಾಡುವ ಬೇಡಿಕೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಾಜಿ ಶಾಸಕರಾದ ಶರಣಪ್ಪ ಸುಣಗಾರ, ರಮೇಶ ಭೂಸನೂರ, ವಿಪ ಮಾಜಿ ಸದಸ್ಯ ಅರುಣ ಶಹಾಪೂರ, ಸಾಹಿತಿಗಳು, ಸಂಘಟನೆಯ ಪ್ರಮುಖರು, ಮಹಿಳಾ ಪ್ರತಿನಿಧಿಗಳು, ಪತ್ರಕರ್ತರು ಸೇರಿಕೊಂಡು ಹತ್ತಾರು ಜನರ ನಿಯೋಗವನ್ನು ರಚಿಸಿ ಸಿಎಂ. ಡಿಸಿಎಂ, ಸಚಿವರ ಮತ್ತು ಸರಕಾರದ ಕಾರ್ಯದರ್ಶಿಗಳನ್ನು ಭೇಟಿ ಮಾಡಿ ಸಿಂದಗಿ ತಾಲೂಕನ್ನು ಜಿಲ್ಲೆಯನ್ನಾಗಿ ರಚಿಸಬೇಕು ಎಂಬ ಮನವಿ ಸಲ್ಲಿಕೆ ಮಾಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಮಕ್ಕಳ ಹಿರಿಯ ಸಾಹಿತಿ, ರಾಷ್ಟ್ರಪ್ರಶಸ್ತಿ ಪುರಸ್ಕೃತ ಹ.ಮ.ಪೂಜಾರ ಮಾತನಾಡಿ, ತಾಲೂಕಿಗೆ ಪ್ರಸ್ತುತ ರೈಲು ಮಾರ್ಗ ಅಗತ್ಯವಾಗಿದೆ. ಆ ಕಾರ್ಯಕ್ಕೆ ಶಾಸಕರು ಹೆಚ್ಚಿನ ಗಮನ ಹರಿಸಬೇಕು. ಈ ಕುರಿತು ಶಾಸಕರು ಕೇಂದ್ರ ಮತ್ತು ರಾಜ್ಯ ಸರಕಾರದ ಮೇಲೆ ಒತ್ತಡ ಹಾಕಬೇಕೆಂದರು.

ಈ ವೇಳೆ ವಿಪ ಮಾಜಿ ಸದಸ್ಯ ಅರುಣ ಶಹಾಪೂರ ಮಾತನಾಡಿ, ಸಿಂದಗಿ ತಾಲೂಕನ್ನು ಜಿಲ್ಲೆ ಮಾಡುವ ದಿಸೆಯಲ್ಲಿ ಕ್ಷೇತ್ರದ ಶಾಸಕರು, ಮಾಜಿ ಶಾಸಕರು ಎಲ್ಲರೂ ಒಂದಾಗಿ ಹೋರಾಟ ಮಾಡುತ್ತಿರುವುದು ವಿಶೇಷ. ಸಿಂದಗಿ ಜಿಲ್ಲೆಯಾಗುವ ಸಮಯ ಹತ್ತಿರ ಬಂದಿದೆ ಹಾಗಾಗಿ ಎಲ್ಲರ ಹೋರಾಟ ಅವಿಶ್ರಾಂತವಾಗಿರಲಿ ಎಂದು ವಿವಿಧ ಸಂಘ-ಸಂಸ್ಥೆ ಮತ್ತು ಸಂಘಟನೆಗಳಿಗೆ ಮನವಿ ಮಾಡಿಕೊಂಡರು.

ಇದೇ ಸಂದರ್ಭದಲ್ಲಿ ಅಶೋಕ ಅಲ್ಲಾಪೂರ, ಆನಂದ ಶಾಬಾದಿ, ಡಾ.ದಸ್ತಗೀರ ಮುಲ್ಲಾ (ಇಂಗಳಗಿ), ಈರಣ್ಣ ರಾವೂರ, ಸುರೇಶ ಪೂಜಾರಿ, ಪ್ರಕಾಶ ಹಿರೇಕುರುಬರ, ಸಂತೋಷ ಪಾಟೀಲ ಡಂಬಳ, ಶಿವಾನಂದ ಕಲಬುರ್ಗಿ, ವೈ.ಸಿ.ಮಯೂರ, ಸಂತೋಷ ಮಣಿಗಿರಿ, ಶಿಲ್ಪಾ ಕುದರಗೊಂಡ, ಸುನಂದಾ ಯಂಪೂರೆ ಮಹಾನಂದ ಬಮ್ಮಣ್ಣಿ, ಮಲ್ಲಿಕಾರ್ಜುನ ಅಲ್ಲಾಪೂರ, ದಾನಪ್ಪ ಜೋಗುರ, ಯಶವಂತಾರಗೌಡ ರೂಗಿ, ಮಹಾದೇವಿ ಹಿರೇಮಠ, ಶೈಲಜಾ ಸ್ಥಾವರಮಠ ಸೇರಿದಂತೆ ಮಹಿಳಾ ಪ್ರತಿನಿಧಿಗಳು, ಸಾಹಿತಿಗಳು, ಬಸವದಳದ ಸದಸ್ಯರು, ದಲಿತ ಮುಖಂಡರು, ಮಾಧ್ಯಮ ಮಿತ್ರರು ಹಾಗೂ ವಿವಿಧ ಸಂಘಟನೆಗಳ ಅಧ್ಯಕ್ಷರು, ಸಂಚಾಲಕರು, ಪದಾಧಿಕಾ-ರಿಗಳು ಭಾಗವಹಿಸಿದ್ದರು.

# ಮದ್ಯಮುಕ್ತ ಗೋದಾ ಕುಸ್ತಿ



ಉದಯರಶ್ಮಿ ನ್ಯೂಸ್

'ಮದ್ಯಮುಕ್ತ ರಾಜ್ಯ ಮಾಡ್ತಾರಂತಪಾ' ಅಂದ ಶೌರಿ

'ಏನ್ ಮಾಡ್ತಾರಲೇ, ಮೊನ್ನಿ ಹೊಸ ವರ್ಷದ ಹಿಂದಿನ ರಾತ್ರಿ ಇನ್ನೂರು ಕೋಟಿ ಕುಡ್ದಾವ್ರು' ನಕ್ಕ ಜಬರಿ

'ಮತ್ತ ಅವತ್ತ ಕೋವಿಡ್ ತಳಿ ಎಲ್ಲಿ ಹೋಗಿತ್ತ?' ಕೇಳಿದಳು ರಾಣಿ

'ಅದು ಮದ್ಯಮುಕ್ತ ಇಲ್ಲಿ ಅಲ್ಲಪಾ, ಅದು ಛತ್ತಿಸಗಢದಾಗ ಜನೇವರಿ 22 ಕ್ಕ ಮಾಡಕತ್ತಾರ' ಅಂದ ಶೌರಿ

'ಯಾಕ?'

'ಏ ಅದು ರಾಮನ ತಾಯಿ ಊರು ಐತಿ, ಅವತ್ತ ಅಯೋಧ್ಯದಾಗ ರಾಮಲಲ್ಲಾನ ಕುಂದ್ರಸ್ತಾರ, ಅದಕ್ಕ ಅಂದ ಮದ್ಯ ಬಂದ್' ಅಂದ ಶೌರಿ

' ಮತ್ತ ಗೋದ್ರಾ ಮರಕಳಿಸ್ತೈತಿ ಅಂತ ಹರಿ ಹೇಳೇತಿ' ಅಂದಳು ರಾಣಿ

'ಆ ಪ್ರಸಾದ ಮತ್ತ ಅಂದೇತಿ, ನಿತ್ಯಾನಂದಗ ಭಾಳ ಭಕ್ತರ ಇದ್ದಂಗ ಸಿದ್ರಾಮಯ್ಯಗೂ ಭಕ್ತರ ಭಾಳ ಅದಾರಂತ' ಅಂದ ಜಬರಿ

' ಮತ್ತ ನಮ್ಮ ಇಜಾಪುರದ ಹುಲಿ ಗಪ್ಪ ಆಗೇತಲಾ?' ಕೇಳಿದ ಶೌರಿ

'ಅಸಂತೋಸ ಜರಾ ತಡಿ ಗಡಬಡ ಮಾಡಬ್ಯಾಡ ಅಂದಿರಬೇಕು' ನಕ್ಕಳು ರಾಣಿ

ವ್ಯಂಗೋಕ್ತಿ



– ಶ್ರೀನಿವಾಸ ಜಾಲವಾದಿ, ಸುರಪುರ

' ಮತ್ತ ಜ್ಯೂನಿಯರ್ ಕುಸ್ತಿಪಟುಗಳು ಸಾಕ್ಷಿ ಪೂನಿಯಾ ಪೋಗಾಟ ವಿರುದ್ಧ ತಿರಿಗಿ ಬಿದ್ದಾರಂತಲಾ?' ಕೇಳಿದ ಜಬರಿ

'ಇದರಾಗೂ ಸಂಜಯ ಬಾಸ್ ಕೈವಾಡ ಐತೇನು ಮತ್ತ?' ಎಂದ ಶೌರಿ

'ಏನ ಹೇಳಾಕ ಬರಂಗಿಲ್ಲ ನೋಡು, ಎಲ್ಲಾರೂ ಏನೇನೋ ಮಾಡಕತ್ತಾರ' ರಾಣಿ ಅಂದಳು

'ಏ ಕುಡದ ನಿಶಾದಾಗ ಅಂಗನವಾಡಿ ಸಹಾಯಕಿ ಮೂಗು ಕತ್ತರಸ್ಯಾನ ಬೆಳಗಾವ್ಯಾಗ ಒಬ್ಬವ' ಅಂದ ಜಬರಿ

'ಈ ಬೆಳಗಾವಿ ಬರೇ ಇದ್ಕೆ ಪ್ರಸಿದ್ದ ಆಗೇತಿ ನೋಡು' ಶೌರಿ ಅಂದ

'ಈಗ ಅಯೋಧ್ಯಾ ಕಾಂಡ ಶುರು ಆಯ್ತೆಂತ ಹೇಳಿ ಇಲ್ಲೂ ಶೂರ್ಪನಖಿ ಕೇಸ್ ಮರುಕಳಿಸೇಧ ಹ್ಯಾಂಗ?' ಅಂದಳು ರಾಣಿ

'ಇದನ್ನ ನಮ್ಮ ಹರಿಯುವ ಪ್ರಸಾದಂಗೆ ಕೇಳ್ಬೇಕ ನೋಡು' ನಕ್ಕ ಜಬರಿ

'ಲೋಕಸೇವಾ ಕಾರ್ಯದರ್ಶಿಗಿ ಅಲ್ಲಿ ಅಧ್ಯಕ್ಷರು ಮತ್ತ ಕೆಲ ಸದಸ್ಯರು ಕೂಡಿ ಬ್ಲಾಕಮೇಲ್ ಮಾಡ್ಯಾರಂತ' ಅಂತ ಅಂದಳು ರಾಣಿ

'ಅದನ್ನೂ 'ಮದ್ಯಮುಕ್ತ'ದ ಗತ್ಲೆ 'ಲಾಬಿಮುಕ್ತ' ಮಾಡ್ಬೇಕು ನೋಡು'



ಅಂದ ಜಬರಿ

'ಅದು ಹುಲ್ಲುಗಾವಲು ಅಂತ ಹೋಗಿರ್ತಾವು ಮೇಯಾಕ, ಮತ್ತ ಅಲ್ಲಿ ಹುಲ್ಲೇ ಇಲ್ಲ ಅಂದ್ರ ಯಾರು ಹೊಕ್ಕಾರು?' ಕೇಳಿದ ಶೌರಿ

'ಎಲ್ಲಾರೂ ಸೇರಿ ದೇಶ ಉದ್ಧಾರ ಮಾಡಬೇಕು ಅಂತ ಆಸೆ ಐತಿ ಹಿರ್ಯಾರ್ದು' ಅಂದ ಜಬರಿ

' ಮತ್ತ ಈಗ ಬ್ಲಾಕಮೇಲ್ ಮಾಡೂದು ಮತ್ತ ಯಾಕಂತ ತಿಳದಿ?' ರಾಣಿ ಕೇಳಿದಳು

'ಯಾಕ?'

'ದೇಶ ಉದ್ದಾರ ಮಾಡಿ ಸಿದ್ದಶಿವ ವಿಜಯಪ್ರಸಾದ ತಿನ್ಲಿಕ್ಕೆ' ಅಂತ ನಕ್ಕಳು ರಾಣಿ

'ಮತ್ತ ಡಿಜೆ ಹಳ್ಳಿ ಕೆಜೆ ಹಳ್ಳಿ ಹಲ್ಲೆಕೋರರು ಅಮಾಯಕರು ಅದಾರ, ಅವರನ್ನು ಬಿಡುಗಡೆ ಮಾಡ್ಲಿಕ್ಕಿ ಪ್ರಯತ್ನ ಮಾಡ್ತಿನಿ ಅಂದತಿ ಬಂಡೆ' ಅಂದ ಜಬರಿ

'ಹಂ ಮತ್ತ ಅವ್ರೆಲ್ಲಾ ಪಾಪ ಏನು ತಿಳಿಯದ ಮುಗ್ಧರು ಅದಾರ, ಅವರನ್ನು ಹೊರಗ ತಂದ್ರ ಮತ್ತ ಅಪಾಯಕಾರಿಗಳನ್ನೆಲ್ಲ ಅವರ ಮುಖಾಂತರ ಜಡಿಲಿಕ್ಕಿ ಬರತೈತಿ ಅಂತ ಪ್ಲಾನ್ ಇವರದು' ಅಂದ ಶೌರಿ ವ್ಯಂಗ ನಗೆ ನಕ್ಕ

'ಈ ದೇಶದಾಗ ಮುಗ್ಧರೆಲ್ಲಾ ಡೆಂಜರ್ಗಳು ಆಗ್ಯಾರ, ಮತ್ತ ಕ್ರಿಮಿನಲ್ಗಳೆಲ್ಲಾ ಪಾಪ ಏನೂ ಅರಿಯದ ಮುಗ್ಧರು ಆಗ್ಯಾರ' ಅಂ-ದಳು ರಾಣಿ

'ಈ ತುಷ್ಟಿಕರಣ ಮಾಡೂದ್ರಾಗೇ ಇವರ ಜನ್ಮ ಉದ್ಧಾರ ಆಗಿ ಹೋಯ್ತು' ಅಂದ ಗುಂಡ್ಯಾ

'ಸೋಮಣ್ಣ ಗರಂ ಆಗೇತಲಾ?' ಎಂದ ಜಬರಿ

'ಯಾಕ?'

'ಮರಿ ಸಿಟ್ಟೂರಿಗಿ ವಾರ್ನಿಂಗ್ ಕೊಟ್ಟತಲೇ, ನನ್ನ ಸೋಲಿಸಿದವ್ರ ಜೋಡಿ ಅಡ್ಡಾಡಬ್ಯಾಡ, ಇಲ್ಲಾಂದ್ರ ನೋಡ ಮತ್ತ ಅಂತ' ಅಂದ ಶೌರಿ

'ಅದ್ಕೆ ಅದು ದೊಡ್ಡಗೌಡ್ರನ್ನ ಭೆಟ್ಟಿ ಆಗಿ ತಮ್ಮೂರಿಗಿ ಸ್ಕೆಚ್ ಹಾಕಿ ಕುಂತೈತಿ' ಎಂದಳು ರಾಣಿ

'ಗೌಡರು, ಟಗರ ಮತ್ತ ಬಂಡೆಗಳಿಂದ್ಲೆ 'ಕೈ' ಫಿನಿಶ್ ಆಕ್ಕೈತಿ



' ಅಂತ ಫರ್ಮಾನು ಹೊಂಡಸ್ಯಾರು ' ಅಂತ ರಾಶಿ ಅಂದಳು

'ಅದಕ್ಕ ಗರಂ ಆದ ಟಗರು,' ಅವ್ರ ಶಾಪನೇ ನಮಗ ವರ' ಅಂದತಿ' ಎಂದ ಶೌರಿ

'ಮತ್ತ ಕಮಲಕ್ಕನ ಮನ್ಯಾಗ ಬಾಡಗಿ ಹಿಡದತಿ ತೆನಿಗೌಡ ಅಂತ ಟಗರ ನಕ್ಕತಿ' ಎಂದ ಗುಂಡ್ಯಾ

'ನಮ್ಮ ರಾಮ ಇಲ್ಲೇ ಹುಂಡ್ಯಾಗ ಅದಾನ ಅಂತ ಆಂಜನೇಯ ಬೋಲ್ಯಾ' ಎಂದ ಬಾಶಾ

'ಅದ ಏನರೇ ಆಗ್ಲಿ ಮೂರು ಡಿಸಿಎಂ ಬೇಕೇ ಬೇಕು ಅಂತ ಡಿನ್ನರ್ ಮಾಡ್ಯಾರು ಸಾವುಕಾರು' ಎಂದ ಶೌರಿ

'ಅದಕ್ಕ ಪ್ರಿಯಾಂಕ ಮೂರ ಯಾಕ ಆರ ಮಾಡ್ಕೋರಿ ಅಂತ ಟಾಂಟ್ ಹೊಡದಾರ' ಎಂದ ಕಾಕಾ

'ವರ್ಸ ಆರಾರ ಮಾಡಿದ್ರ ಎಲ್ಲಾರ ಪಾಳಿ ಹತ್ತೈತಿ' ಎಂದು ನಕ್ಕಳು ರಾಣಿ

'ಏ ಲೋಕಾ ಆದ ಮ್ಯಾಗ 'ಕೈ' ಸರಕಾರ ಎಲ್ಲಿ ಇರತೈತಿ?' ಅಂತ ಪ್ರಶ್ನೆ ಮಾಡ್ಯಾರು ಯಡ್ಡಿ ಆ್ಯಂಡ್ ಗ್ಯಾಂಗ್' ಅಂದ ಶೌರಿ

'ಈ 'ಶಕ್ತಿ' ಜಾರಿಗಿ ತಂದದ್ದಕ್ಕ ಗಂಡಸೂರಿಗಿ ಬಸ್ ಇರಲಾರದಂಗ ಆಗೇತಿ ದೇಖೋ ಭಾಯಿ' ಅಂದ ಬಾಶಾ

'ಅದಕ್ಕ ಈ ಸೀಟ 50 50 ಮಾಡಬೇಕು ನೋಡು' ಅಂದ ಗುಂಡ್ಯಾ

'ಏ ಅವೆಲ್ಲಾ ನಡೆಂಗಿಲ್ಲ ಆ ಕಂಡಕ್ಟರ್ಗೆ ಸೀಟ ಇರ್ಲಾರ್ದಂಗ ಆಗೇತಿ' ಅಂತ ಅಂದ ಶೌರಿ

'ಎಲ್ಲಾ ಫ್ರೀ ಸೀಟು ಇರುದ್ರಿಂದ ಕಂಡಕ್ಟರ ಬೇಕೇ ಆಗಿಲ್ಲ' ಅಂದ ಗುಂಡ್ಯಾ

'ಇನ್ನ ಇಮಾನ ಫ್ರೀ ಮಾಡವ್ರು ಅದಾರಂತ' ಅಂದ ಜಬರಿ

'ಇಮಾನ ಫ್ರೀ ಮಾಡಿದ್ರ ..... ಎಲ್ಲಾರೂ ಮ್ಯಾಗೇ' ಅಂದಳು ರಾಣಿ

ಆಕೆ ಮಾತ ಕೇಳಿ ದಂಗಾದ್ರು ಜಬರಿ ಶೌರಿ

# ಶ್ರೀರಾಮ ಮಂತ್ರಾಕ್ಷತೆಯ ಕಲಶಾರ್ಚನೆ ಮತ್ತು ಕರೆಯೋಲೆ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ : ಪಟ್ಟಣದ ಬಸವ ನಗರದ ಅಂಬಾ ಭವಾನಿ ದೇವಸ್ಥಾನದಲ್ಲಿ ಅಯೋಧ್ಯಾ ನಗ-ರಿಯಿಂದ, ಶ್ರೀ ರಾಮದೇವಾಲಯದ ಉದ್ಘಾಟನೆಯ ಆಹ್ವಾನಾರ್ಥವಾಗಿ ಬಂದಿರುವ ಪವಿತ್ರ ಮಂತ್ರಾಕ್ಷತೆಯ ಕಲಶಾರ್ಚನೆ ಮತ್ತು ಕರೆಯೋಲೆ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಈ ವೇಳೆ ತಾಲೂಕ ಕೆ.ಕೆ.ಒ ಅಧ್ಯಕ್ಷ ಯಶವಂತ ಕಲಾಲ, ತಾಲೂಕಾ ಕೆ.ಕೆ.ಎಮ್.ಪಿ ಅಧ್ಯಕ್ಷ ಶಿವಾಜಿ ವಿಜಾಪೂರ, ವಿ.ಎಚ್.ಪಿ ಅಧ್ಯಕ್ಷ ಎಸ್.ಡಿ.ರಾಂಪೂರ, ತಾಲೂಕಾ ಅಕ್ಷತಾ ಅಭಿಯಾನ ಪ್ರಮುಖ ಪ್ರಭು ಕಡಿ, ಶಿಕ್ಷಕ ರಾಮಚಂದ್ರ ಹೆಗಡೆ, ಎಮ್.ಪಿ.ದಂಡಾವತಿ, ಕುಬೇರ ಮಿರಜಕರ, ಶಸಾಪ ಅಧ್ಯಕ್ಷರಾದ ಬಸವರಾಜ ನಾಲತವಾಡ, ನಿವೃತ್ತ ಗುರುಮಾತೆಯವರಾದ ಶಾಂತಾ ಭಟ್ಟ, ಲಕ್ಷ್ಮೀ ಬಾಯಿ ತಾಡಪತ್ರೆ, ಲೀಲಾ ಭಟ್ಟ, ರಾಘವ ಘಾಟಗಿ, ಯಶೋಧರ ಮಿರಜಕರ, ಲಕ್ಷ್ಮೀ ಬಡಿಗೇರ, ಇಂದು ನಾಯಕ, ಶಂಕರ ಡಂಬಳ, ಹಣಮಂತ ನಲವಡೆ, ಶ್ರೀಕಾಂತ ಹಿರೇಮಠ, ವಿನಾಯಕ ಘಾಟಗೆ, ಗುರಪ್ಪ ತಾಡಪತ್ರಿ ಸೇರಿದಂತೆ ಮತ್ತೀತರರು ಇದ್ದರು.

# ಕಾಲುವೆ ಜಾಲಗಳಿಗೆ ಜ.8ರಿಂದ 10ವರೆಗೆ ನೀರು ಬಿಡುಗಡೆ

ಉದಯರಶ್ಮಿ ನ್ಯೂಸ್



ವಿಜಯಪುರ: ಕೃಷ್ಣಾ ಮೇಲ್ದಂಡೆ ಯೋಜನೆಯ ರಾಂಪೂರ (ಪಅ) ನಿಮಪೋ ವೃತ್ತದಡಿ ಬರುವ ಇಂಡಿ ಶಾಖಾ ಕಾಲುವೆ ಹಾಗೂ ಇಂಡಿ ಏತ ನೀರಾವರಿ ಕಾಲುವೆಗಳಡಿ ಬರುವ ಅಚ್ಚುಕಟ್ಟು ಪ್ರದೇಶದಲ್ಲಿ ಬೆಳೆದು ನಿಂತಿರುವ ಮೆಣಸಿನಕಾಯಿ ಬೆಳೆಗಳನ್ನು ಸಂರಕ್ಷಿಸಲು ಜ.8 ರಿಂದ 11 ರವರೆಗೆ ನೀರು ಹರಿಸಲಾಗುವುದು ಎಂದು ಕೆಬಿಜೆಎನ್ಎಲ್ ರಾಂಪೂರ ವೃತ್ತದ ಅಧೀಕ್ಷಕ ಅಭಿಯಂತರ ಮನೋಜಕುಮಾರ ಗಡಬಳ್ಳಿ ಅವರು ತಿಳಿಸಿದ್ದಾರೆ.

ಉಪ ಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಸಚಿವರೂ ಆದ ಕೃಷ್ಣಾ ಮೇಲ್ಕಂಡೆ ಯೋಜನೆ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ ಹಾಗೂ ಅಚ್ಚು ಕಟ್ಟು ಪ್ರದೇಶದ ಶಾಸಕರು, ಜನಪ್ರತಿನಿಧಿಗಳು, ಅಧಿಕಾ-ರಿಗಳು, ರೈತ ಮುಖಂಡರೊಂದಿಗೆ ಜ.6 ರಂದು ನಡೆದ ವಿಡಿಯೋ ಸಂವಾದ ಸಭೆಯ ನಿರ್ಣಯದಂತೆ ಕೃಷ್ಣಾ ಮೇಲ್ದಂಡೆ ಯೋಜನೆಯ ಅಚ್ಚುಕಟ್ಟು ಪ್ರದೇಶಕ್ಕೆ ನಾರಾಯಣಪುರ ಜಲಾಶಯದಿಂದ 03 ದಿನ ನೀರನ್ನು ಹರಿಸಲು ನೀಡಿದ ನಿರ್ದೇಶನದಂತೆ ಕಾಲುವೆ ಮೂಲಕ 2.75 ಟಿಎಂಸಿ ನೀರನ್ನು ಹರಿಸಲಾಗುವುದು.

ಈ ಅವಧಿಯಲ್ಲಿ ಕಾಲುವೆ ಚಾಜಲ ಗೇಟ್‌ಗಳಿಗೆ ಹಾನಿ ಮಾಡುವುದು, ಎಸ್ಕೇಪ್ ಮೂಲಕ ಹಳ್ಳಕ್ಕೆ ನೀರು ಹರಿಸುವುದು, ಸೈಪನಗಳ ಮೂಲಕ ಮಣ್ಣಿನ ಏರಿಯಲ್ಲಿ ನೀರನ್ನು ಎತ್ತಿಕೊಳ್ಳುವುದು, ಕಾಲುವೆ ಜಾಲದಲ್ಲಿ ಪಂಪುಗಳ ಮೂಲಕ ನೀರನ್ನು ಎತ್ತುವುದನ್ನು ನಿಬಂಧಿಸಲಾಗಿದ್ದು, ರೈತ ಬಾಂಧವರು ನೀರಿನ ಬಳಕೆಯಲ್ಲಿ ಮಿತವ್ಯಯ ಸಾಧಿಸುವ ಮೂಲಕ ಕೃಷ್ಣಾ ಭಾಗ್ಯ ಜಲನಿಗಮದೊಂದಿಗೆ ಸಹಕರಿಸುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂಡಿ ಗ್ರಾಮಾಂತರ ಸಿಪಿಐ ಡಪ್ಪಿನ ರಿಗೆ 6 ಚಿನ್ನದ ಪದಕ



**ಉದಯರಶ್ಮಿ ನ್ಯೂಸ್**

ಇಂಡಿ: ಇತ್ತೀಚೆಗೆ ಬೆಳಗಾವಿಯಲ್ಲಿ ನಡೆದ ಉತ್ತರ ವಲಯ ಮಟ್ಟದ ಪೋಲಿಸ್ ಕರ್ತವ್ಯ ಕೂಟ ಸ್ಪರ್ಧೆಯಲ್ಲಿ ಇಂಡಿಯ ಗ್ರಾಮಾಂತರ ಸಿಪಿಐ ಮಲ್ಲಿಕಾರ್ಜುನ ಎಂ. ಡಪ್ಪಿನ ಅವರು ಪ್ರಥಮ ಸ್ಥಾನ ಪಡೆದು ಆರು ಚಿನ್ನದ ಪದಕ ಪಡೆದಿದ್ದಾರೆ.

ಸಾಧನೆ ಮಾಡಿದ ಡಪ್ಪಿನ ಅವರಿಗೆ ಬೆಳಗಾವಿ ಉತ್ತರ ವಲಯದ ಪೋಲಿಸ್ ಮಹಾನಿರ್ದೇಶಕ ವಿಕಾಸಕುಮಾರ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ.

ಮಲ್ಲಿಕಾರ್ಜುನ ಡಪ್ಪಿನ 2005 ರಲ್ಲಿ ತರಬೇತಿ ಪಡೆದು ಬೆಳಗಾವಿಯಲ್ಲಿ ಪ್ರೊಬೇಷನರಿ ಅವಧಿ ಪೂರ್ಣಗೊಳಿಸಿ ಹುಬ್ಬಳ್ಳಿ ಧಾರವಾಡ ರಾಯಚೂರು, ಯಾದಗಿರಿ ಬೀದರ್, ಕಲಬುರಗಿ, ಬಳ್ಳಾರಿ, ವಿಜಯನಗರ ಠಾಣೆಗಳಲ್ಲಿ ಕಾರ್ಯನಿರ್ವಹಿಸಿದ್ದಾರೆ.

ಪೋಲಿಸ್ ವೃತ್ತಿ ನೈಪುಣ್ಯತೆಯೊಂದಿಗೆ ಕೈಗೊಳ್ಳಬೇಕಾದ ವೈಜ್ಞಾನಿಕ ಕಾನೂನು ಜ್ಞಾನ, ಸಾಕ್ಷಿಗಳ ಸಂಗ್ರಹದಲ್ಲಿ ನೈಪುಣ್ಯತೆ ಬೆರಳಚ್ಚು ತನಿಖೆ, ವಿಧಿವಿಜ್ಞಾನ, ಪಾದದ ಮುದ್ರೆ, ಫೋಟೋ ವಿಡಿಯೋಗ್ರಫಿ, ಶ್ವಾನದಳಪೋಲಿಸ್ ವೃತ್ತಿಪರ ತನಿಖೆ ಸೇರಿದಂತೆ ಹಲವು ಮಹತ್ವದ ಪರೀಕ್ಷೆಯಲ್ಲಿ ಸಿಪಿಐ ಎಂ.ಎಂ. ಡಪ್ಪಿನರವರು ಅತ್ಯುತ್ತಮ ಸಾಧನೆ ತೋರಿ ಬಹುಮಾನ ತನ್ನದಾಗಿಸಿಕೊಂಡಿದ್ದಾರೆ.

ಲಖನೌದಲ್ಲಿ 67 ನೇ ರಾಷ್ಟ್ರೀಯ ಕರ್ತವ್ಯ ಕೂಟ ಹಿನ್ನೆಲೆಯಲ್ಲಿ ಎಲ್ಲ ತಾಲೂಕು, ಜಿಲ್ಲಾ ಹಾಗೂ ವಲಯ ಮಟ್ಟದಲ್ಲಿ ಪೋಲಿಸ ಕರ್ತವ್ಯ ಕೂಟ ಆಯೋಜಿಸಿ ವಿಜೇತರನ್ನು ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆ ಮಾಡಿ ಕಳುಹಿಸಲಾಗುವದು. ಅಲ್ಲೂ ಉತ್ತಮ ಪ್ರದರ್ಶನ ನೀಡಿ ಆಯ್ಕೆಯಾಗುವ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ವೃತ್ತಿ ಪರತೆಯ ಬಗ್ಗೆ ಹೆಚ್ಚಿನ ತರಬೇತಿ ನೀಡಿ ರಾಷ್ಟ್ರೀಯ ಪೋಲಿಸ್ ಕರ್ತವ್ಯ ಕೂಟಕ್ಕೆ ಕಳುಹಿಸಲಾಗುತ್ತಿದೆ. ಅಖಿಲ ಭಾರತ ಮಟ್ಟದಲ್ಲಿ ನಡೆಯುವ ಈ ಸ್ಪರ್ಧೆಯಲ್ಲಿ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಸಾಧನೆ ಮಾಡಿದ ದೇಶದ ಎಲ್ಲ ರಾಜ್ಯಗಳ ಪೋಲಿಸ ಅಧಿಕಾರಿ ಸಿಬ್ಬಂದಿ ಪಾಲ್ಗೊಳ್ಳಲಿದ್ದಾರೆ.

# ವಿದ್ಯಾರ್ಥಿಗಳು ಕೀಳರಿಮೆ, ಹಿಂಜರಿಕೆ ತೊರೆಯಬೇಕು :ಮುಕ್ತಾ




**ಉದಯರಶ್ಮಿ ನ್ಯೂಸ್**

ಸಿಂದಗಿ: ವಿದ್ಯಾರ್ಥಿಗಳು ಕೀಳರಿಮೆ, ಹಿಂಜರಿಕೆ ತೊರೆದು, ಹೊಸ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು. ಪ್ರತಿಯೊಬ್ಬರಲ್ಲೂ ಹಲವಾರು ದೌರ್ಬಲ್ಯಗಳು, ನ್ಯೂನ್ಯತೆಗಳಿದ್ದು, ಅದನ್ನು ಎದುರಿಸಿ ಮುಂದುವರೆಯಬೇಕು ಎಂದು ಬಾಗಲಕೋಟೆಯ ಬಸವೇಶ್ವರ ಕಲಾ ಮಹಾವಿದ್ಯಾಲಯದ ನಿವೃತ್ತ ಪ್ರಾಧ್ಯಾಪಕಿ ಮುಕ್ತಾ ಹಿರೇಮಠ ಕಿವಿಮಾತು ಹೇಳಿದರು.

ಪಟ್ಟಣದ ಶ್ರೀ ಪದ್ಮರಾಜ ಮಹಿಳಾ ಮಹಾವಿದ್ಯಾಲಯದ ಸಭಾಭವನದಲ್ಲಿ ಶ್ರೀ ಪದ್ಮರಾಜ ಮಹಿಳಾ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭದ ಮುಖ್ಯ ಅತಿಥಿ ಸ್ಥಾನ ವಹಿಸಿ ಅವರು ಮಾತನಾಡಿದರು.

ಸಾನಿಧ್ಯ ವಹಿಸಿದ ಡಾ.ಪ್ರಭು ಸಾರಂಗದೇವ ಶಿವಾಚಾರ್ಯರು ಮಾತನಾಡಿ, ಮಹಿಳೆಯರು ಯಾರ ಮೇಲೆಯೂ ಅವಲಂಬಿತರಾಗದೇ ಸ್ವಾವಲಂಬಿಗಳಾಗಬೇಕೆಂದು ಹಲವಾರು ಕ್ಷೇತ್ರದಲ್ಲಿ ಸಾಧನೆಗೈದ ಹೆಣ್ಣುಮಕ್ಕಳ ಬಗ್ಗೆ ಹೇಳುತ್ತಾ, ವಿಕಲಚೇತನ ಹೆಣ್ಣು ಮಕ್ಕಳು ಸ್ವಾವಲಂಬಿಗಳಾಗಿ ಬದುಕುತ್ತಿರುವ ಅನೇಕ ದೃಷ್ಟಾಂತಗಳ ಮೂಲಕ ವಿದ್ಯಾರ್ಥಿಗಳಿಗೆ ಮನ ಮುಟ್ಟುವಂತೆ ತಿಳಿ ಹೇಳಿದರು.

ಈ ವೇಳೆ ಪ್ರಾಚಾರ್ಯ ಎಂ.ಎಸ್ ಹೈಯಾಳಕರ ಅಧ್ಯಕ್ಷೀಯ ಮಾತುಗಳನ್ನಾಡಿದರು. ಕಾರ್ಯಾಧ್ಯಕ್ಷ ಎಸ್.ಎಸ್. ಸಜ್ಜನ, ಪ್ರಧಾನ ಕಾರ್ಯದರ್ಶಿ ಗಂಗಾ ಗಾಲೀಬ ದೇವಣಗಾಂವ, ಎಂ.ಎಸ್. ಸಜ್ಜನ, ಸುವರ್ಣಾ ಹಿಪ್ಪರಗಿ ವೇದಿಕೆಯ ಮೇಲಿದ್ದರು.

ಈ ವೇಳೆ ಬೋರಗಿ ಎಂ.ಪಿ.ಎಸ್ ಶಾಲೆಗೆ ಶಿಕ್ಷಕಿಯಾಗಿ ಆಯ್ಕೆಯಾದ ಎಂ.ಎಸ್ ಸಜ್ಜನ ಹಾಗೂ ವಿದ್ಯಾರ್ಥಿನಿ ಸುವರ್ಣ ಹಿಪ್ಪರಗಿ ಅವರನ್ನು ಸನ್ಮಾನಿಸಲಾಯಿತು.

ವಿದ್ಯಾರ್ಥಿನಿ ವಿಶಾಲಾಕ್ಷಿ ಮಾಲಿಪಾಟೀಲ ನಿರೂಪಿಸಿದರು. ಉಪನ್ಯಾಸಕಿ ಹೇಮಾ ಹಿರೇಮಠ ಸ್ವಾಗತಿಸಿದರು. ಪಲ್ಲವಿ ಹೆಳವರ ಪ್ರಾರ್ಥಿಸಿದರು. ಗಂಗಾ ಗಾಲೀಬ ದೇವಣಗಾಂವ ವಂದಿಸಿದರು.

ಇದೇ ಸಂದರ್ಭದಲ್ಲಿ ಡಾ.ಚನ್ನಪ್ಪ ಕಟ್ಟಿ, ಡಾ.ಎಂ.ಎಂ.ಪಡಶೆಟ್ಟಿ, ಭೀಮನಗೌಡ ಸಿಂಗನಳ್ಳಿ, ಮುಕ್ತಾಯಕ್ಕ ಕತ್ತಿ, ಬಸಮ್ಮ ಧರಿ, ಮಹಾವಿದ್ಯಾಲಯದ ಸಿಬ್ಬಂದಿ ಗಿರೀಶ ಕುಲಕರ್ಣಿ, ಯು.ಸಿ ಪೂಜೇರಿ, ಎಂ.ಪಿ. ಸಾಗರ. ಜಿ.ಎ. ನಂದಿಮಠ, ಆರ್.ಎ. ಹಾಲಕೇರಿ, ಎ.ಎ.ಕೋಕಣಿ, ಲಕ್ಷ್ಮೀ ಮಾರ್ಸನಳ್ಳಿ, ಹೇಮಾ ಕಾಸರ, ಸತೀಶ ಕಕ್ಕಸಗೇರಿ, ಶಿವಶಂಕರ ಕುಂಬಾರ, ಲಕ್ಷ್ಮೀ ಭಜಂತ್ರಿ ಸೇರಿದಂತೆ ಅನೇಕರಿದ್ದರು.

# ಶಿವಶಿಂಪಿ ಭವನಕ್ಕೆ ರೂ.25 ಲಕ್ಷ ಅನುದಾನ :ಶಾಸಕ ಮನಗೂಳಿ



**ಉದಯರಶ್ಮಿ ನ್ಯೂಸ್**

ಸಿಂದಗಿ: ಪಟ್ಟಣದಲ್ಲಿ ಶ್ರೀ ಶಿವದಾಸಿಮಯ್ಯ ಶಿವಶಿಂಪಿ ಸಮುದಾಯ ಸಭಾಭವನ ನಿರ್ಮಾಣಗೊಳ್ಳಲು ರಾಜ್ಯ ಸರ್ಕಾರದಿಂದ 25 ಲಕ್ಷ ಅನುದಾನವನ್ನು ನೀಡಲಾಗುವುದು ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಅವರು ಪಟ್ಟಣದ ಲೋಣಿ ಲೇಔಟ್‌ದಲ್ಲಿ ಸೋಮವಾರ ಶ್ರೀ ಶಿವದಾಸಿಮಯ್ಯ ಶಿವಸಿಂಪಿ ಸಮಾಜ ವಿಕಾಸ ಸಂಘದಿಂದ ನಡೆದ ಸಭಾಭವನದ ಮತ್ತುಕಾರ್ಯಾಲಯದ ಭೂಮಿ ಪೂಜೆಯನ್ನು ನೆರವೇರಿಸಿ ಮಾತನಾಡಿದರು.

ಸಣ್ಣ ಸಣ್ಣ ಸಮುದಾಯಗಳು ಯಾವತ್ತು ನಾವು ಸಣ್ಣ ಸಮುದಾಯದವರು ಎಂದು ಭಾವಿಸಿಕೊಳ್ಳಬಾರದು ಸಣ್ಣ ಸಮುದಾಯದಲ್ಲಿಯೆ ಅತ್ಯಂತ ಮಹತ್ತರವಾದ ಪ್ರತಿಭೆಗಳಿರುತ್ತವೆ. ಅಂತಹ ಸಮುದಾಯಗಳನ್ನು ಶಿಕ್ಷಣ, ಸಾಮಾಜಿಕ, ಆರೋಗ್ಯವಾಗಿ ಮತ್ತು ಎಲ್ಲ ರೀತಿಗಳಲ್ಲಿ ಅಭಿವೃದ್ಧಿ ಪಡಿಸುವ ಕನಸನ್ನು ಹೊತ್ತುಕೊಂಡಿದ್ದೇನೆ. ಪಾಲಕರು ಮಕ್ಕಳಿಗೆ ಉತ್ತಮ ಶಿಕ್ಷಣ, ಸಂಸ್ಕಾರ ನೀಡಬೇಕು ಎಂದ ಅವರು ನಮ್ಮ ತಂದೆಯ ಕಾಲದಿಂದಲೂ ಶಿವಶಿಂಪಿ ಸಮುದಾಯ ನಮ್ಮ ಮನೆತನದ ಮೇಲೆ ಅತಿಯಾದ ಗೌರವವನ್ನಿಟ್ಟುಕೊಂಡಿದೆ ಆ ಸಮುದಾಯಕ್ಕೆ ನಾವು ಸದಾಋಣಿಯಾಗಿರುತ್ತೇವೆ ಎಂದರು.

ಸಮುದಾಯದ ಪ್ರಮುಖ ಪ್ರಭುಲಿಂಗ ಲೋಣಿ, ಸಮಾಜದ ಉಪಾಧ್ಯಕ್ಷ ಡಾ.ವಿಶ್ವರಾಧ್ಯ ಶಿವಶಿಂಪಗೇರ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಮಾಜದ ಗೌರವಾಧ್ಯಕ್ಷ ಬಂಡೆಪ್ಪ ಲೋಣಿ, ಅಧ್ಯಕ್ಷ ಅಶೋಕ ಲೋಣಿ, ನ್ಯಾಯವಾದಿ ಬಿ.ಜಿ.ನೆಲ್ಲಗಿ, ಮಂಜುನಾಥ ಬಿಜಾಪೂರ ಇದ್ದರು.

ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಲೋಣಿ, ವಿಶ್ವನಾಥ ಶಿವಶಿಂಪಗೇರ, ಮಲ್ಲಿಕಾರ್ಜುನ ಶಿವಶಿಂಪಗೇರ, ವಿಶ್ವನಾಥ ಶಿವಶಿಂಪಗೇರ, ಭೋಜಪ್ಪ ಅತನೂರ, ಶಿವಕುಮಾರ ಶಿವಶಿಂಪಗೇರ, ಗಂಗಾಧರ ಶಿವಶೀಂಪಗೇರ, ಡಾ.ಸಾತಪ್ಪ ಶಿವಶೀಂಪಗೇರ, ಕಾಶೀನಾಥ ಲೋಣಿ, ಸಂಗಪ್ಪ ತಾಳಿಕೋಟಿ, ವಿಜಯಲಕ್ಷ್ಮೀ ಲೋಣಿ, ಸೂರ್ಯಕಾಂತ ಅತನೂರ, ಡಾ. ಬಾಬು ಶಿವಶಿಂಪಗೇರ, ಚಂದ್ರಶೇಖರ ಹರಿಹರ, ಗುರುಪಾದ ಲೋಣಿ, ಸುರೇಶ ಅತನೂರ ಸೇ–ರಿದಂತೆ ಇತರರು ಇದ್ದರು.

## ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬಿ ಎಚ್ಚರಿಕೆ

# ಸರ್ಕಾರಿ ಶಾಲಾ ಮಕ್ಕಳು ಬೇರೆಡೆ ವಿದ್ಯಾಭ್ಯಾಸ ಮಾಡಿದರೆ ಕ್ರಮ



**ಉದಯರಶ್ಮಿ ನ್ಯೂಸ್**

ಸಿಂದಗಿ: ತಾಲೂಕಿನಲ್ಲಿ 51 ಮಕ್ಕಳು ತೀವ್ರ ಅಪೌಷ್ಠಿಕತೆಯಿಂದ ಬಳಲುವ ಮಕ್ಕಳಿದ್ದಾರೆ. ಈ ರೀತಿಯಾಗಿ ಮಕ್ಕಳು ಬಳಲಬಾರದು ಎಂಬ ದೃಷ್ಠಿಯಿಂದ ಸರಕಾರ ತಾಲೂಕು ಆಸ್ಪತ್ರೆಯಲ್ಲಿ ಎನ್‌ಆರ್‌ಸಿ ಮಕ್ಕಳ ಘಟಕಗಳನ್ನು ಸ್ಥಾಪಿಸಿದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬಿ ಹೇಳಿದರು.

ಪಟ್ಟಣಕ್ಕೆ ದಿಡೀರನೇ ವಿವಿಧ ಇಲಾಖೆ ಮತ್ತು ಶಾಲೆಗಳಿಗೆ ಭೇಟಿ ನೀಡಿ ಮಾಧ್ಯಮ ಮಿತ್ರರೊಂದಿಗೆ ಮಾತನಾಡಿದ ಅವರು, ಮಕ್ಕಳು ಅಪೌಷ್ಠಿಕತೆಯಿಂದ ಬಳಲಬಾರದು ಎಂಬ ದೃಷ್ಠಿಯಿಂದ ಮಕ್ಕಳ ಪೌಷ್ಠಿಕ ಪುನಃಶ್ಚೇತನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ. ಆದರೆ ಇಲ್ಲಿನ ವೈದ್ಯಾಧಿಕಾರಿ ನಿರ್ಲಕ್ಷ್ಯದಿಂದಾಗಿ ಬಂದಿತ್ತು. ಅದನ್ನು ಖುದ್ದು ನಾವಾಗಿಯೇ ತೆಗೆಯುವ ಪರಿಸ್ಥಿತಿ ಬಂದಿದೆ. ತಾಲೂಕು ಆಸ್ಪತ್ರೆಯ ನವಜಾತ ಶಿಶುವಿನ ಘಟಕದಲ್ಲಿ ವಿದ್ಯುತ್ ವ್ಯವಸ್ಥೆ ಸರಿಯಾಗಿಲ್ಲ. ಬಾಣಂತಿಯರಿಗೆ ಬಿಸಿ ನೀರಿನ ವ್ಯವಸ್ಥೆಯಿಲ್ಲ. ಪಥ್ಯ ಅಹಾರವು ಸರಿಯಾಗಿ ನೀಡುತ್ತಿಲ್ಲ ಎಂಬುದು ಅಲ್ಲಿನ ಬಾಣಂತಿಯರಿಗೆ ವಿಚಾ–ರಿಸಿದಾಗ ತಿಳಿದು ಬಂದಿದೆ ಹಾಗಾಗಿ ನಾಳೆ ವಿಜಯಪುರದಲ್ಲಿ ನಡೆಯುವ ಸಭೆಗೆ ತಾಲೂಕು ವೈದ್ಯಾಧಿಕಾರಿಗಳನ್ನು ಬರಲು ತಿಳಿಸಲಾಗಿದೆ.

ಅಲ್ಪ ಸಂಖ್ಯಾತರ ವಸತಿ ಶಾಲೆಗೆ ಭೇಟಿ: ವಸತಿ ಶಾಲೆಯಲ್ಲಿ 30–40 ಮಕ್ಕಳು ಚರ್ಮರೋಗದ ಸಮಸ್ಯೆಯಿಂದ ಮನೆಗೆ ಹೋಗಿದ್ದಾರೆ. ಮಕ್ಕಳಿಗೆ ಚಳಿಗಾಲದಲ್ಲಿ ಬಿಸಿ ನೀರಿನ ವ್ಯವಸ್ಥೆ ಸರಿಯಾಗಿಲ್ಲ. 2016ರ ಕಾಯ್ದೆಯ ಪ್ರಕಾರ ಇರಬೇಕಾದ ಮಕ್ಕಳ ಕ್ಲಬ್, ಮಕ್ಕಳ ರಚನಾ ಸಮಿತಿ, 1098 ಸಹಾಯವಾಣಿ ಇಂತಹ ಅನೇಕ ಮುಂಜಾಗ್ರತ ಕ್ರಮಗಳು ಅಳವಡಿಸಿಲ್ಲ. ಮಕ್ಕಳಿಗಾಗಿ ಸರಕಾರ ನೀಡಿದ ಬೆಡ್‌ಗಳನ್ನು ಒಂದೆಡೆಗಿಟ್ಟಿದ್ದಾರೆ. ಆದರೆ ಮಕ್ಕಳು ಮಾತ್ರ ನೆಲದ ಮೇಲೆಯೇ ಮಲಗುತ್ತಿರುವುದು ವಿಪರ್ಯಾಸ. ಒಂದೆ ಕೋಣೆಯಲ್ಲಿಯೇ 50ಕ್ಕೂ ಹೆಚ್ಚು ಮಕ್ಕಳಿಗೆ ವಸತಿ ವ್ಯವಸ್ಥೆ ಮಾಡಿದ್ದು ಸರಿಯಲ್ಲ ಎಂದು ಎಚ್ಚರಿಕೆ ನೀಡಿದರು.

ವಿದ್ಯಾನಗರ ಸರಕಾರಿ ನಂ.4ರ ಶಾಲೆಗೆ ಭೇಟಿ: ಇಲ್ಲಿನ ಮುಖ್ಯಗುರುಗಳು ಶ್ಯಾಟ್ಸ್ ಪ್ರಕಾರ ಮಕ್ಕಳ ಹಾಜರಾತಿ 181 ಎಂದು ತೋರಿಸಿದ್ದಾರೆ. ದಾಖಲಾತಿ ಅನುಸಾರ 221 ದಾಖಲಾತಿ ಇದೆ. ಇಲ್ಲಿ ಪ್ರಸ್ತುತ ವಾಸ್ತವ ಸ್ಥಿತಿ ನೋಡಿದರೆ ಅವರು ಹೇಳುವ ಪ್ರಕಾರ 110 ಮಕ್ಕಳ ಹಾಜರಾತಿ ಇದೆ. ಬಿಸಿ ಊಟದವರು 100 ಎಂದು ಹೇಳುತ್ತಾರೆ. ಎಲ್ಲ ಸಂಖ್ಯೆಗಳನ್ನು ನೋಡಿದಾಗ ಶಿಕ್ಷಣ ವ್ಯವಸ್ಥೆಯಲ್ಲಿ ನೀಡುತ್ತಿರುವ ಶಿಕ್ಷಣ, ದಾಖಲಾತಿ, ದೀರ್ಘ ಗೈರು ಹಾಜರಿಯಲ್ಲಿಯೂ ಗೊಂದಲವಿದೆ. ಹಾಗಾಗಿ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಮುಖ್ಯಗುರುಗಳು ಜಿಲ್ಲಾಧಿಖಾರಿ ಮತ್ತು ಸಿಇಓ ಅವರು ತೆಗೆದುಕೊಳ್ಳುವ ಸಭೆಗೆ ತಾಲೂಕಿನಲ್ಲಿ ಶಾಲೆ ಬಿಟ್ಟಂತಹ ಮಕ್ಕಳ ಸಂಖ್ಯೆಯನ್ನು ತೆಗೆದುಕೊಂಡ ಹಾಜರಾಗಬೇಕು ಎಂದು ತಿಳಿಸಿದರು.

ಸರಕಾರಿ ಶಾಲೆಯಲ್ಲಿ ದಾಖಲಾತಿ ಇಟ್ಟು, ಖಾಸಗಿ ಶಾಲೆಯಲ್ಲಿ ಮಕ್ಕಳ ವಿದ್ಯಾಭ್ಯಾಸವನ್ನು ಪಡೆದುಕೊಳ್ಳುತ್ತಿದ್ದರೆ. ಅಂತಹ ಶಾಲೆಯ ವಿರುದ್ಧ ಸೂಕ್ತ ಕ್ರಮಕೈಗೊಳ್ಳುವಂತೆ ಶಿಕ್ಷಣ ಇಲಾಖೆಗೆ ಸೂಚಿಸುವಂತೆ ತಿಳಿಸುತ್ತೇನೆ. ಬಿಕ್ಷಾಟನೆ ಮಾಡುತ್ತಿರುವ ಮಕ್ಕಳನ್ನು ಗುರುತಿಸಿ ಮುಂಬರುವ ದಿನಮಾನಗಳಲ್ಲಿ ಮಕ್ಕಳನ್ನು ಗುರುತಿಸಿ, ಪತ್ತೆಹಚ್ಚಿ ಆರೈಕೆ ಮತ್ತು ರಕ್ಷಣೆ ಮಾಡುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಹೇಳುತ್ತೇನೆ.

ಈ ವೇಳೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಬಸವರಾಜ ಜಿಗಳೂರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಂಭುಲಿಂಗ ಹಿರೇಮಠ, ಕಂದಾಯ ನಿರೀಕ್ಷಕ ಆಯ್.ಎ ಮಕಾಂದಾರ, ಜಿ.ಎಸ್.ರೋಡಗಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಚಿಮ್ಮಡ ಜಿಎಲ್‌ಬಿಸಿಗೆ ಸಚಿವ ಸತೀಶ ಜಾರಕಿಹೊಳಿ ಭೇಟಿ



**ಉದಯರಶ್ಮಿ ನ್ಯೂಸ್**

ಚಿಮ್ಮಡ: ಗ್ರಾಮದ ಘಟಪ್ರಭಾ ಎಡದಂಡೆ ಕಾಲುವೆಗೆ (ಜಿಎಲ್‌ಬಿಸಿ) ಲೋಕೋಪಯೋಗಿ ಇಲಾಖೆಯ ಸಚಿವ ಸತೀಶ ಜಾರಕಿಹೊಳಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ತೀವ್ರ ಮಳೆ ಕೊರತೆಯ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಉದ್ದೇಶಕ್ಕಾಗಿ ಕೆರೆ, ಚೆಕ್‌ಡ್ಯಾಂಗಳನ್ನು ತುಂಬಿಸಲು ಕಳೆದ ಒಂದು ವಾರದಿಂದ ಇಲ್ಲಿನ ಜಿಎಲ್‌ಬಿಸಿ ಕಾಲುವೆಯ ಮೂಲಕ ನೀರು ಹ–ರಿಸಲಾಗುತಿದ್ದು, ಬೀಳಗಿ ಭಾಗದಲ್ಲಿ ನೀರು ಪೋರೈಕೆಯಾಗುತ್ತಿಲ್ಲ ಎನ್ನುವ ದೂರುಗಳು ಬಂದ ಹಿನ್ನೆಲೆಯಲ್ಲಿ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಭೇಟಿ ನೀಡಿ ಅಧಿಕಾ–ರಿಗಳೊಂದಿಗೆ ಚರ್ಚಿಸಿ ಪರಿಶೀಲನೆ ನಡೆಸಿದರು. ಈ ಭಾಗದಲ್ಲಿ ಹಲವು ಕೆರೆಗಳು ಭರ್ತಿಯಾಗಿವೆ ಇನ್ನು ಕೆಲವು ಕೆರೆಗಳಿಗೆ ನೀರು ಪೋರೈಕೆಯಾಗುತ್ತಿಲ್ಲ ರಾಯಭಾಗ ಭಾಗದಿಂದ ಈ ಭಾಗಕ್ಕೆ ನೀರು ಸಮರ್ಪಕವಾಗಿ ಬರುತ್ತಿಲ್ಲ ಹೀಗಾಗಿ ಬೀಳಗಿ ಭಾಗಕ್ಕೆ ನೀರು ತಲುಪುತ್ತಿಲ್ಲವೆಂದು ಹಲವು ರೈತರು ಅಧಿಕಾರಿಗಳು ಸಚಿವರಿಗೆ ಮನವರಿಕೆ ಮಾಡಿದರು.

ನೀರು ತಲುಪಿದ ಭಾಗದಲ್ಲಿ ನೀರು ಹರಿಸುವುದನ್ನು ನಿಲ್ಲಿಸಿ ತಲುಪದ ಕಡೆ ಮಾತ್ರ ನೀರು ಹರಿಸುವಂತೆ ಶಾಸಕ ಸಿದ್ದು ಸವದಿ ಅಧಿಕಾರಿಗಳಿಗೆ ಸೂಚಿಸಿದರು. ನೀರು ನಿಲ್ಲಿಸಿದರೆ ರೈತರು ಒಪ್ಪುವುದಿಲ್ಲ ಇದರಿಂದ ಸಮಸ್ಯೆಯಾಗಿದೆಯಂದು ಅಧಿಕಾ–ರಿಗಳು ಮನವರಿಗೆ ಮಾಡಿದರು.

ಬೀಳಗಿ ಕೊಣೆಯ ಭಾಗದವರೆಗೆ ಸಮರ್ಪಕ ನೀರು ಪೋರೈಸುವ ಕಾರ್ಯವನ್ನು ಅಧಿಕಾರಿಗಳು ಕೈಗೊಳ್ಳಬೇಕು ಅವಶ್ಯವೆನಿಸಿದರೆ ಇತರೆ ಇಲಾಖೆಗಳ ಸಹಕಾರ ಪಡೆದು ಎಲ್ಲ ಭಾಗಗಳ ಕೆರೆ, ಬಾಂದಾರ ಭರ್ತಿಯಾಗುವಂತೆ ನೋಡಿಕೊಳ್ಳಬೇಕೆಂದು ಸಚಿವರು ಸೂಚಿಸಿದರು,

ನೀರಾವರಿ ಇಲಾಖೆಯ ಬೆಳಗಾವಿ ಉತ್ತರ ಭಾಗದ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಬಿ.ಆರ್. ರಾಠೋಡ, ಜಮಖಂಡಿ ಕಾರ್ಯ ನಿರ್ವಾಹಕ ಅಧಿಕಾರಿ ಪ್ರಶಾಂತ ಗಿಡದಪ್ಪನವರ, ಘಟಪ್ರಭಾ ಕಾರ್ಯ ನಿರ್ವಾಹಕ ಅಧಿಕಾರಿ ನಾಗೇಶ ಕೋಲಕರ, ಜಮಖಂಡಿಯ ಶ್ರೀಶೈಲ ಕಲ್ಯಾಣಿ, ಬೀಳಗಿಯ ಎಚ್. ಆರ್. ಮಾರಡ್ಡಿ ಹಾಗೂ ಸಹಾಯಕ ಕಾರ್ಯ ನಿರ್ವಹಣಾಧಿಕಾರಿ, ಕಾಂಗ್ರೆಸ್ ಧು–ರೀಣ ಸಿದ್ದು ಕೋಣ್ಣೂರ, ಮಲ್ಲಪ್ಪಾ ಸಿಂಗಾಡಿ, ಲಕ್ಷ್ಮಣ ದೇಸಾರಟ್ಟಿ, ಉಮೇಶ ಪೂಜಾರಿ, ಅಶೋಕ ಧಡೂತಿ, ಕಿರಣ ಕರಲಟ್ಟಿ, ಸೇರಿದಂತೆ ರೈತ ಪ್ರಮುಖರಿದ್ದರು.

## ಕಜಾಪ ಆಲಮೇಲ ತಾಲೂಕು ಘಟಕದ ಉದ್ಘಾಟನೆ । ರಾಜ್ಯಾಧ್ಯಕ್ಷ ಡಾ.ಎಸ್ ಬಾಲಾಜಿ ಆಗ್ರಹ

# ಸರ್ಕಾರ ಹಲಸಂಗಿ ಗೆಳೆಯರ ಅಧ್ಯಯನ ಪೀಠ ಸ್ಥಾಪಿಸಲಿ



**ಉದಯರಶ್ಮಿ ನ್ಯೂಸ್**

ಆಲಮೇಲ: ಜಾನಪದ ಸಂಸ್ಕೃತಿಯು ಗಟ್ಟಿಯಾದ ತಳಹದಿಯಲ್ಲಿ ಹುಟ್ಟಿ ವಿಶಾಲವಾದ ಮನೋಭೂಮಿಕೆಯಲ್ಲಿ ಹರಡಿಕೊಂಡಿದೆ. ಸಾರ್ವತ್ರಿಕ ಮೌಲ್ಯಗಳಾದ ಪ್ರೀತಿ, ಕರುಣೆ, ಸಹನೆ, ಸಮಾನತೆ, ಭಾವೈಕ್ಯತೆ, ಸಹಬಾಳ್ವೆ ಮತ್ತು ಆರೋಗ್ಯಕರ ವಿಷಯಾದಿಗಳು ಜಾನಪದ ಸಂಸ್ಕೃತಿಯ ಆಶಯವಾಗಿವೆ. ಜಾನಪದ ಇಂದು ರೂಪ ಬದಲಾಯಿಸಿದರೂ ತತ್ವ –ಚಿಂತನೆಗಳು ಬದಲಾಗಿಲ್ಲ. ಅದಕ್ಕಾಗಿ ಜಾನಪದಕ್ಕೆ ಎಂದಿಗೂ ಅಳಿವಿಲ್ಲ ಎಂದು ಕನ್ನಡ ಜಾನಪದ ಪರಿಷತ್ ರಾಜ್ಯಾಧ್ಯಕ್ಷ ಡಾ.ಎಸ್ ಬಾಲಾಜಿ ಅಭಿಪ್ರಾಯಪಟ್ಟರು.

ತಾಲೂಕಿನ ಕಡಣಿ ಗ್ರಾಮದ ಶಂಕರಲಿಂಗೇಶ್ವರ ದೇವಾಲಯದಲ್ಲಿ ಪೂಜ್ಯ ಸಿದ್ದೇಶ್ವರ ಸ್ವಾಮೀಜಿ ಮಂಟಪದ ಗೀಗೀಪದಕಾರ ಕಡಣಿ ಕಲ್ಲಪ್ಪ ವೇದಿಕೆಯಲ್ಲಿ, ಕನ್ನಡ ಜಾನಪದ ಪರಿಷತ್ ಆಲಮೇಲ ತಾಲೂಕು ಘಟಕದ ಉದ್ಘಾಟನೆ ಮಾಡಿ ಮಾತನಾಡುತ್ತಾ ಹಲಸಂಗಿ ಗೆಳೆಯರ ಬಳಗದ ಜಾನಪದ ಸೇವೆ ನಾಡಿಗೆ ಅನನ್ಯವಾದುದು. ಸರಕಾರ ಹಲಸಂಗಿ ಗೆಳೆಯರ ಅಧ್ಯಯನ ಪೀಠ ಸ್ಥಾಪಿಸಬೇಕೆಂದು ಆಗ್ರಹಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ (ಪಡಗಾನೂರ) ಮಾತನಾಡಿ, ಹಳ್ಳಿಗಳು ಜಾನಪದ ಸಂರಕ್ಷಿಸುವ ಮೂಲ ನೆಲೆಗಳಾಗಿವೆ.ಜಾನಪದ ಕಲಾವಿದರು ನಮ್ಮ ಸಂಸ್ಕೃತಿಯ ರೂವಾರಿಗಳಾಗಿ ಕೆಲಸ ಮಾಡುತ್ತಿದ್ದಾರೆ. ಸರ್ಕಾರ ಕಲಾವಿದರಿಗೆ ಸಾಕಷ್ಟು ಅನಕೂಲ ಮಾಡುತ್ತಿದೆ. ಸರಕಾರದ ನಿಯಮಾನುಸಾರ ಕಲಾಪ್ರದರ್ಶನ ಮಾಡಿ ಸೌಲಭ್ಯ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಕ ಜಾ ಪ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಪುಂಡಲೀಕ ಮುರಾಳ ನೂತನ ಪದಾಧಿಕಾರಿಗಳಿಗೆ ಪದಪತ್ರ ನೀಡಿ ಜಿಲ್ಲೆಯಲ್ಲಿ ಪರಿಷತ್ತಿನ ಕಾರ್ಯ ಚಟುವಟಿಕೆ ಕುರಿತು ಮಾತನಾಡಿದರು.

ತಾಲೂಕು ಘಟಕದ ನೂತನ ಅಧ್ಯಕ್ಷ ಗಿರೀಶ ಕಂಬಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಪಂ ಅಧ್ಯಕ್ಷ ಬಸವಲಿಂಗಪ್ಪ ಕತ್ತಿ ಮತ್ತು ಗ್ರಾ ಪಂ ಸದಸ್ಯ ಸಂತೋಷ ಕ್ಷತ್ರಿ ಮಾತನಾಡಿದರು.

ವೇದಿಕೆಯಲ್ಲಿ ರಾಚಯ್ಯ ಮಠ, ಗ್ರಾ ಪಂ ಸದಸ್ಯ ಬಸವರಾಜ ತಾವರಗೇರಿ, ಪಿಕೆಪಿಎಸ್ ಉಪಾಧ್ಯಕ್ಷ ಈರಯ್ಯ ಗಂಗನಳ್ಳಿ, ಎಸ್ ಡಿ ಎಂ ಸಿ ಅಧ್ಯಕ್ಷ ಆನಂದಗೌಡ ಪಾಟೀಲ, ಗಂಗಾಧರ ಶ್ರೀಗಿರಿ, ಶಿವನಗೌಡ ಪಾಟೀಲ, ಡಾ.ಮಲ್ಲು ಪ್ಯಾಟಿ, ಈರಣ್ಣ ಸುತಾರ ಅತಿಥಿಗಳಾಗಿದ್ದರು.

ತಾಲೂಕಿನ ವಿವಿಧ ಜಾನಪದ ಕಲಾವಿದರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಭಜನೆ, ಡೊಳ್ಳಿನಪದ, ಕೋಲಾಟ, ಷಹನಾಯಿ, ಸಂಪ್ರದಾಯಪದ ಕಲಾಪ್ರದರ್ಶನ ನಡೆಯಿತು.

ಸಾಯಿಬಣ್ಣ ತಾವರಗೇರಿ ನಿರೂಪಿಸಿದರು. ಪುಂಡಲೀಕ ಸುರಗಿಹಳ್ಳಿ ಸ್ವಾಗತಿಸಿದರು.